ಕನ್ನಡ ದಿನಪತ್ರಿಕೆ
16 ಫೆಬ್ರುವರಿ । ಶುಕ್ರವಾರ
16 February 2024

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 ಸಂಪುಟ – 4 ಸಂಚಿಕೆ – 316 ಪುಟ – 4 RNI . KARKAN/2020/79084 ADVRT EMAIL. BELAGAVIVARADIEDITOR@GMAIL.COM NEWSBELAGAVI@GMAIL.COM 9900332089 REG.NO G-2/PMG/KA/NK/BM/139/2024-26

ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ನೀಡಿದ ಲಾಲ್ ಬಹದ್ದೂರ್ ಶಾಸ್ತ್ರಿ ಮೊಮ್ಮಗ

ದೆಹಲಿ: ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಮೊಮ್ಮಗ ವಿಭಾಕರ ಶಾಸ್ತ್ರಿ ಇಂದು ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ನೀಡಿದ್ದಾರೆ.

ವಿಭಾಕರ್ ಅವರು ಬಿಜೆಪಿ ಸೇರಲಿದ್ದಾರೆ. ಫಿನಲ್ಲಿ ರಾಜೀನಾಮೆ ನೀಡಿರುವ ಬಗ್ಗೆ ಘೋಷಣೆ ಮಾಡಿದ್ದಾರೆ. ಪಕ್ಷದ ಆದ್ಯತೆಯ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದೇನೆ ಎಂದು ತಿಳಿಸಿದ್ದಾರೆ. ಮಧ್ಯಾಹ್ನದ ವೇಳೆಗೆ ಬಿಜೆಪಿ ಸೇರುವ ಸಾಧ್ಯತೆ ಇದೆ.

ಇನ್ನೇನು ಕೆಲವೇ ತಿಂಗಳಲ್ಲಿ ಲೋಕಸಭೆ ಚುನಾವಣೆ ನಡೆಯಲಿದೆ. ಇದೇ ಹೊತ್ತಿನಲ್ಲಿ ವಿಭಾಕರ ಶಾಸ್ತ್ರಿ ರಾಜೀನಾಮೆ ನೀಡಿದ್ದಾರೆ. ಮೊನ್ನೆ ಮಹಾರಾಷ್ಟ್ರದ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಅಶೋಕ್ ಚವಾಣ್ ಕಾಂಗ್ರೆಸ್ ಪಕ್ಷಕ್ಕೆ ಗುಡ್ಬೈ ಹೇಳಿ ಬಿಜೆಪಿ ಸೇರಿದ್ದರು. ಇದೀಗ ಶಾಸ್ತ್ರಿ ಮೊಮ್ಮಗ ಪಕ್ಷ ಬಿಡ್ತಿದ್ದಾರೆ. ಲೋಕಸಭೆ ಚುನಾವಣೆ ಹೊತ್ತಲ್ಲಿ ಕಾಂಗ್ರೆಸ್ಗೆ ಇದು ದೊಡ್ಡ ಪೆಟ್ಟು ನೀಡಿದೆ.

ಸದನದಲ್ಲಿ 'ವಿಪಕ್ಷದವರು ಗೂಂಡಾಗಳು': ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಸಿಎಂ ಸಿದ್ದರಾಮಯ್ಯ ಅವರು ವಿಧಾನ ಪರಿಷತ್ ನಲ್ಲಿ ಮಾತನಾಡುವ ವೇಳೆ ವಿಪಕ್ಷದವರು ಗೂಂಡಾಗಳು ಎಂದು ವಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಇದರಿಂದಾಗಿ ಸದನದಲ್ಲಿ ಗದ್ದಲ ಏರ್ಪಟ್ಟು, ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿದ್ದಾರೆ. ಇನ್ನೂ ಸಭಾ ತ್ಯಾಗದ ಬಳಿಕ ವಿಧಾನಪ–ರಿಷತ್ತಿನ ವಿಪಕ್ಷ ನಾಯಕ ಕೋಟ ಶ್ರೀನಿವಾಸ ಪೂಜಾರಿ ಮಾತನಾಡಿ, ನಾಲ್ಕರಿಂದ ಐದು ನಿಮಿಷದ ಮಿತಿ ಉಳ್ಳ ಪ್ರಶ್ನೆಗೆ ಸಂಬಂಧಿಸಿ ಮಾತನಾಡಿದ ಮುಖ್ಯಮಂತ್ರಿಗಳು ಕೇಂದ್ರ ಸರಕಾರವನ್ನು ಸುದೀರ್ಘವಾಗಿ ಟೀಕಿಸಿದ್ದಾರೆ. ಗಂಟೆಗಟ್ಟಲೆ ಕೇಂದ್ರ ಸರಕಾರವನ್ನು ಟೀಕಿಸಿದ್ದು, ನಾವು ಆಕ್ಷೇಪಿಸಿದ್ದೇವೆ. ಆದರೆ, ನಮ್ಮ ಆಕ್ಷೇಪಕ್ಕೆ ಉತ್ತರಿಸುವುದನ್ನು ಬಿಟ್ಟ ಸಿಎಂ ಅವರು ಸದನದಲ್ಲಿ ಇದ್ದ ಎಲ್ಲ ವಿಪಕ್ಷಗಳನ್ನು ಗೂಂಡಾಗಳು ಎಂದಿದ್ದಾರೆ ಎಂದು ವಿವ–ರಿಸಿದರು. ಮುಖ್ಯಮಂತ್ರಿಗಳು ಸದನದಲ್ಲಿ ಗೂಂಡಾಗಳು ಎಂಬ ಶಬ್ದ ಬಳಸಿದ್ದನ್ನು ನಾನು ನೋಡಿಲ್ಲ. ಅವರು ಎರಡೂ ಶಬ್ದಗಳನ್ನು ವಾಪಸ್ ಪಡೆದು ಕ್ಷಮೆ ಕೇಳಲು ಆಗ್ರಹಿಸಿದ್ದೇವೆ. ಇದೆಲ್ಲವನ್ನು ಪ್ರತಿಭಟಿಸಿ ನಾವು ಮತ್ತು ನಮ್ಮ ಸಹಪಕ್ಷ ಜೆಡಿಎಸ್ನವರು ಸಭಾತ್ಯಾಗ ಮಾಡಿದ್ದೇವೆ ಎಂದು ತಿಳಿಸಿದರು.

ಜೆಡಿಎಸ್ನ ಶರವಣ ಅವರು ಮಾತನಾಡಿ, ಮುಖ್ಯಮಂತ್ರಿಗಳ ಸುದೀರ್ಘ ಉತ್ತರವನ್ನು ಸೌಜನ್ಯದಿಂದ ಕೇಳಿಸಿಕೊಳ್ಳುತ್ತಿದ್ದೆವು. ಪದೇಪದೇ ಅವರು ಕೇಂದ್ರ ಸರಕಾರವನ್ನು ದೂರಿದ್ದಾರೆ. ಆಗ ಆಕ್ಷೇಪಿಸಿದಾಗ 'ನೀವು ವಿಪಕ್ಷ ಸದಸ್ಯರು ಗೂಂಡಾಗಳಾ, ಥೂ, ಛೀ ಎಂದು ನಮ್ಮನ್ನೆಲ್ಲ ಬೆದರಿಸುವ ಕೆಲಸಕ್ಕೆ ಕೈ ಹಾಕಿದ್ದಾರೆ' ಎಂದು ಟೀಕಿಸಿದರು.ಆರೂವರೆ ಕೋಟಿ ಜನರ ಪ್ರತಿನಿಧಿಯಾಗಿರುವ ಮುಖ್ಯಮಂತ್ರಿಗಳು ಅಸಾಂವಿಧಾನಿಕ ಪದ ಬಳಸಿದ್ದಾರೆ. ಮುಖ್ಯಮಂತ್ರಿಗಳು ತಮ್ಮ ಪದ ಬಳಕೆಗೆ ವಿಷಾದ ಸೂಚಿಸಿಲ್ಲ. ಸಿಎಂ ಅವರ ವರ್ತನೆ, ಪದ ಪ್ರಯೋಗದಿಂದ ನಮಗೆ ಬಹಳ ನೋವಾಗಿದೆ. ಆದ್ದರಿಂದ ವಿಪಕ್ಷದ ಸದಸ್ಯರೆಲ್ಲರೂ ಸಭಾತ್ಯಾಗ ಮಾಡಿದ್ದಾಗಿ ಹೇಳಿದರು.ರಾಜ್ಯದ ಜನರು ಮುಖ್ಯಮಂತ್ರಿಗಳ ವರ್ತನೆಗೆ ತಕ್ಕ ಉತ್ತರವನ್ನು ಸೂಕ್ತ ಸಮಯದಲ್ಲಿ ನೀಡುತ್ತಾರೆ ಎಂದು ತಿಳಿಸಿದ ಅವರು, ಇವತ್ತು ಕಲಾಪ ಬಹಿಷ್ಕರಿಸಿದ್ದೇವೆ; ಮುಖ್ಯಮಂತ್ರಿಗಳು ಮಾತ್ರವಲ್ಲದೆ, ಸಚಿವರು ಕೂಡ ಪದೇಪದೇ ಎದ್ದುನಿಂತು ವಿಪಕ್ಷದವರು ಮಾತನಾಡಲು ಅವಕಾಶ ಕೊಟ್ಟಿಲ್ಲ ಎಂದು ತಿಳಿಸಿದರು.

ಎಚ್.ಡಿ. ದೇವೇಗೌಡ ಆರೋಗ್ಯದಲ್ಲಿ ಏರುಪೇರು

ಬೆಂಗಳೂ: ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಉಸಿರಾಟ ಸಮಸ್ಯೆಯಿಂದಾಗಿ ಬೆಂಗಳೂರಿನ ಮಣಿಪಾಲ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸದ್ಯ ಬಂದಿರುವ ಮಾಹಿತಿ ಪ್ರಕಾರ ದೇವೇಗೌಡರ ಆರೋಗ್ಯ ಸ್ಥಿರವಾಗಿದೆ ಎಂದು ಆಸ್ಪತ್ರೆ ಮೂಲದ ತಿಳಿದು ಬಂದಿದೆ.

ದೇವೇಗೌಡರಿಗೆ ಬೆಳಗ್ಗೆ ಉಸಿರಾಟ ಸಮಸ್ಯೆ ಕಾಣಿಸಿಕೊಂಡಿದ್ದು, ಕೂಡಲೇ ಅವರನ್ನು ಮಣಿಪಾಲ್ ಆಸ್ಪತ್ರೆಗೆ ಕರೆದುಕೊಂಡೊ ಹೋಗಲಾಗಿದೆ. ಶ್ವಾಸಕೋಶ ತಜ್ಞ ಡಾ. ಸತ್ಯನಾರಾಯಣ ಅವರು ಪರೀಕ್ಷೆ ನಡೆಸಿ, ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ನೀಡುತ್ತಿದ್ದು, ಸದ್ಯ ಅವರ ಆರೋಗ್ಯ ಸ್ಥಿರವಾಗಿದೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ಲಂಚ ಸ್ವೀಕರಿಸುವಾಗ ಲೋಕಾ ಬಲೆಗೆ ಬಿದ್ದ ಮುಖ್ಯ ಶಿಕ್ಷಕ

ಬೀದರ್: ಮುಖ್ಯ ಶಿಕ್ಷಕನೊಬ್ಬ ಲಂಚ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಲೋಕಾ ಬಲೆಗೆ ಬಿದ್ದ ಘಟನೆ ಬೀದರ್ ನಗರದ ಹೊರವಲಯದಲ್ಲಿರುವ ವಿವೇಕಾನಂದ ಶಾಲೆಯಲ್ಲಿ ನಡೆದಿದೆ.

ಮುಖ್ಯ ಶಿಕ್ಷಕ ತುಕಾರಾಂ ಕಾಂಬಳೆ ಎಂಬಾತ 50 ಸಾವಿರ ಹಣ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದಾನೆ. ವಿಜ್ಞಾನ ಶಿಕ್ಷಕಿ ಶಶಿಕಲಾ ಎಂಬುವವರು ಪೆನ್ಷನ್ ಮಂಜೂರಿ ಪ್ರಕ್ರಿಯೆಗಾಗಿ ಮುಖ್ಯಶಿಕ್ಷಕನ ಬಳಿ ಮನವಿ ಮಾಡಿದ್ದರು. ಆದರೆ, ಫೈಲ್ ಮೂವ್ ಮಾಡಲು ತುಕಾರಾಂ ಕಾಂಬಳೆ ಅವರು ಬರೊಬ್ಬರಿ 3 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದಾರೆ. ಇದೀಗ 1 ಲಕ್ಷ ಹಣದ ಚೆಕ್ ಪಡೆದು, 50 ಸಾವಿರ ಹಣ ಪಡೆಯುವ ವೇಳೆ ಲೋಕಾಯುಕ್ತ ಡಿವೈ–ಎಸ್ಪಿ ಎನ್.ಎಮ್.ಓಲೇಕಾರ್ ಮಾಗದರ್ಶನದಲ್ಲಿ ದಾಳಿ ಮಾಡಿ, ಶಿಕ್ಷಕನನ್ನು ವಶಕ್ಕೆ ಪಡೆದಿದ್ದಾರೆ.

ಇದೇ ಫೆ.06 ರಂದು ಚಿಕ್ಕಮಗಳೂರು ಕೆಎಸ್ಆರ್ಟಿಸಿ ವಿಭಾಗ ನಿಯಂತ್ರಕ ಬಸವರಾಜು ಎಂಬುವವರು ಲೋಕಾಯುಕ್ತ ಬಲೆಗೆ ಬಿದ್ದಿದ್ದರು. ಚಿಕ್ಕಮಗಳೂರಿನಿಂದ ಕಡೂರು ಡಿಪೋಗೆ ವರ್ಗಾವಣೆ ಮಾಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಈ ಹಿನ್ನಲೆ ಚಾಲಕ ಲೋಕಾಯುಕ್ತ ಅಧಿಕಾರಿಗಳಿಗೆ ದೂರು ನೀಡಿದ್ದರು. ಚಾಲಕ ನೀಡಿದ ದೂರಿನ ಮೇರೆಗೆ ದಾಳಿ ನಡೆಸಿದ್ದ ಲೋಕಾಯುಕ್ತರು, ವಿಭಾಗೀಯ ನಿಯಂತ್ರಣಾಧಿಕಾರಿ ಕಚೇರಿಯಲ್ಲೇ ಬಸ್ ಚಾಲಕನಿಂದ 10 ಸಾವಿರ ರೂ. ಲಂಚ ಸ್ವೀಕರಿಸುವಾಗ ರೆಡ್ಹ್ಯಾಂಡ್ ಆಗಿ ಅಧಿಕಾರಿಯನ್ನು ಬಂಧಿಸಿದ್ದಾರೆ.

ನಮ್ಮ ತಂತ್ರಗಾರಿಕೆ ಏನೆಂಬುದು ಫೆ.27ರಂದು ತಿಳಿಯಲಿದೆ: ಡಿಕೆಶಿ

ಬೆಂಗಳೂರು: ರಾಜ್ಯಸಭೆ ಚುನಾವಣೆಯಲ್ಲಿ ನಾವು ಏನು ರಾಜ–ಕಾರಣ ಮಾಡಬಹುದು ಎಂಬುದು ಫೆಬ್ರವರಿ 27ನೇ ತಾರೀಖು ಗೊತ್ತಾಗಲಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಒಗ್ಗಟ್ಟಿನ ಪ್ರದರ್ಶನವನ್ನು ನಾವು ಮಾಡುತ್ತೇವೆ. ರಾಜ್ಯಸಭೆ ಚುನಾವಣೆಗೆ ಫೆ.27ರಂದು ಮತದಾನ ನಡೆದು ಅಂದೇ ಮತದಾನ ಎಣಿಕೆಯಾಗಿ ಫಲಿತಾಂಶ ಹೊರಬರಲಿದೆ. ರಾಜಕಾರಣ ಏನು ಎಂಬುದನ್ನು ಅಲ್ಲಿಯವರೆಗೆ ನೋಡುತ್ತಾ ಇರಿ ಎಂದರು.

ವಿಧಾನಸಭೆ ಚುನಾವಣೆಯಲ್ಲಿ ವಿಫಲವಾಗಿರುವುದಕ್ಕೆ ಬಿಜೆಪಿ ಜೊತೆ ಹೋಗಿದ್ದು, ಎರಡು ಪಕ್ಷಗಳು ಒಟ್ಟಿಗೆ ಸೇರಿ ಹೊಸ ನಂಟಸ್ತಿಕೆ ಮಾಡುತ್ತಿವೆ. ಅಲ್ಲಿರುವಂತವರು ಅವರ ಆತ್ಮಸಾಕ್ಷಿ ಮತವನ್ನು ನಮಗೆ ಕೊಡುತ್ತಾರೆ ಎಂಬ ಭರವಸೆ ಇದೆ ಎಂದು ತಿಳಿಸಿದರು. ಮತದಾನದ ನಂತರ ಎಷ್ಟು ಮತಗಳು ಬರಲಿವೆ ಎಂಬುದನ್ನು ತಿಳಿಸುತ್ತೇವೆ ಎಂದರು.

ರಾಜ್ಯಸಭೆ ಚುನಾವಣೆ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಅಜಯ್ ಮಕೇನ್ ಅವರ ಕುಟುಂಬ ತ್ಯಾಗ ಮಾಡಿದೆ. ದೇಶದ ಐಕ್ಯತೆ, ಶಾಂತಿಗಾಗಿ ಪ್ರಾಣ ತ್ಯಾಗ ಮಾಡಿದೆ. ವಿದ್ಯಾರ್ಥಿಯಿಂದಲೇ ಸಂಘಟನೆ ಮಾಡಿದ್ದಾರೆ.

ನಮ್ಮ ಪಕ್ಷದ ಆಧಾರ ಸ್ತಂಭ ಅದಕ್ಕಾಗಿ ಬಹಳ ಸಂತೋಷದಿಂದ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದ್ದೇವೆ ಎಂದರು.ಬಿಜೆಪಿ, ಜೆಡಿಎಸ್ನವರು ಈ ಹಿಂದೆ ಹೊರಗಿನವರನ್ನು ಕರೆತಂದು ಸ್ಪರ್ಧೆಗಿಳಿಸಿದ್ದರಲ್ಲ ಅದರ ಬಗ್ಗೆ ಅವರನ್ನೇ ಕೇಳಿ ಎಂದು ಹೇಳಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ರಾಜ್ಯಸಭೆ ಚುನಾವಣೆಗೆ ಮೂವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ಈ ಹಿಂದೆ ಮೂವರು ಅಭ್ಯರ್ಥಿಗಳು ಆಯ್ಕೆಯಾಗಿ ರಾಜ್ಯಸಭೆಗೆ ಹೋಗಿ ರಾಜ್ಯಕ್ಕೆ ನ್ಯಾಯ ಒದಗಿಸಿದ್ದಾರೆ ಎಂದರು. ಜೆಡಿಎಸ್ನಿಂದ ಕುಪೇಂದ್ರ ರೆಡ್ಡಿ ಅವರು ಸ್ಪರ್ಧೆ ಮಾಡಿರುವ ಬಗ್ಗೆ ಪ್ರತಿಕ್ರಿಯಿಸಿ, ಅವರ ಪ್ರಯತ್ನವನ್ನು ಅವರು ಮಾಡಲಿ ನಮ್ಮ ಪ್ರಯತ್ನವನ್ನು ನಾವು ಮಾಡುತ್ತೇವೆ ಎಂದು ಹೇಳಿದರು.

ಮುನ್ನೆಚ್ಚರಿಕೆ ಲೆಕ್ಕಿಸದ ಜನ: ಕಳೆದ ಐದು ವರ್ಷಗಳಲ್ಲಿ ರಾಜ್ಯದ 309 ರೈಲು ಪ್ರಯಾಣಿಕರ ಸಾವು

ಮೈಸೂರು: ರೈಲು ಮಾರ್ಗ ದಾಟುವಾಗ ಅಥವಾ ಚಲಿಸುವ ರೈಲುಗಳನ್ನು ಹತ್ತುವಾಗ ಹಾಗೂ ಇಳಿಯುವಾಗ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆಗಳ ಕುರಿತು ರೈಲ್ವೆ ಇಲಾಖೆಯು ಪದೇ ಪದೇ ಎಚ್ಚರಿಕೆ ನೀಡಿದ್ದರೂ, ಅಪಘಾತದಲ್ಲಿ ಪ್ರಯಾಣಿಕರು ಗಾಯಗೊಂಡ ಅಥವಾ ಸಾವನ್ನಪ್ಪುವ ಘಟನೆಗಳು ನಿಯಮಿತವಾಗಿ ವರದಿಯಾಗುತ್ತಿವೆ.

ರೈಲ್ವೆ ಇಲಾಖೆಯ ವರದಿಗಳ ಪ್ರಕಾರ, ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ 309 ಜನರು ರೈಲಿಗೆ ಸಿಲುಕಿ ಪ್ರಾಣ ಕಳೆದುಕೊಂಡಿದ್ದಾರೆ. ರೈಲ್ವೆ ಇಲಾಖೆಯ ಇತ್ತೀಚಿನ ಅಂಕಿಅಂಶಗಳ ಪ್ರಕಾರ, 2019–20ರಲ್ಲಿ ಒಟ್ಟು 89 ಜನರು, 2020–21 ರಲ್ಲಿ 44 ಜನರು, 2021–22 ರಲ್ಲಿ 37, 2022–23 ರಲ್ಲಿ 71 ಮತ್ತು 2023–24 ರಲ್ಲಿ 68 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಈ ಸಂತ್ರಸ್ತರು ರೈಲು ನಿಲ್ದಾಣಗಳಲ್ಲಿ ಮತ್ತು ಲೆವೆಲ್ ಕ್ರಾಸಿಂಗ್ಗಳಲ್ಲಿ ಚಲಿಸುವ ರೈಲುಗಳ ಚಕ್ರಗಳ ಅಡಿಯಲ್ಲಿ ಆಕಸ್ಮಿಕವಾಗಿ ಸಿಲುಕಿ ಪ್ರಾಣ ಕಳೆದುಕೊಂಡಿದ್ದಾರೆ.

ರೈಲು ಹಳಿಗಳನ್ನು ದಾಟುವಾಗ ಅನುಸರಿಸಬೇಕಾದ ಮುನ್ನೆಚ್ಚ–ರಿಕೆಗಳ ಬಗ್ಗೆ ರೈಲ್ವೆ ಅಧಿಕಾರಿಗಳು ಮತ್ತು ಸಿಬ್ಬಂದಿ ನಿಯಮಿತವಾಗಿ ಪ್ರಯಾಣಿಕರಿಗೆ ಮತ್ತು ಸಾರ್ವಜನಿಕರಿಗೆ ಎಚ್ಚರಿಕೆ ನೀಡುತ್ತಿದ್ದಾರೆ ಎಂದು ಹಿರಿಯ ರೈಲ್ವೆ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬೆಳಗಾವಿ ಪಾಲಿಕೆಗೆ ಕನ್ನಡ ಭಾಷಿಕ ಮೇಯರ್

ಮೇಯರ್ ಆಗಿ ಸವಿತಾ ಕಾಂಬಳೆ – ಉಪಮೇಯರ್ ಚವ್ಹಾಣ್ ಆಯ್ಕೆ

ಬೆಳಗಾವಿ: ಬೆಳಗಾವಿಯ 22ನೇ ಅವಧಿಯ ಮೇಯರ್ ಹಾಗೂ ಉಪಮೇಯರ್ ಚುನಾವಣೆ ಪ್ರಕ್ರಿಯೆ ನಡೆದಿದ್ದು, ಈ ಬಾರಿಯ ಮೇಯರ್ ಪಟ್ಟವನ್ನು ಪೌರ ಕಾರ್ಮಿಕ ಮಹಿಳೆ ಸವಿತಾ ಕಾಂಬಳೆ ಆಯ್ಕೆಯಾಗಿದ್ದಾರೆ.

ಹೌದು... ಸ್ಪರ್ಧೆಗೆ ಅರ್ಹರಾಗಿರುವ ಸವಿತಾ ಕಾಂಬಳೆ ಅವರು ಕೆಲ ವರ್ಷಗಳ ಹಿಂದೆ ಇದೇ ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಪೌರಕಾರ್ಮಿಕರಾಗಿ ಕೆಲಸ ಮಾಡಿದ್ದಾರೆ. ನಂತರ ಹೆಲ್ಮೆಟ್ ಕಂಪನಿಯೊಂದರಲ್ಲಿ ದಿನಗೂಲಿ ಕೆಲಸ ಮಾಡುತ್ತಿದ್ದರು. ನಂತರ ಊದುಬತ್ತಿ ತಯಾರಿಕಾ ಘಟಕ ಶುರು ಮಾಡಿದ್ದರು. 2021ರಲ್ಲಿ ಅವ–ರಿಗೆ ಒಲಿದು ಬಂದ ಅವಕಾಶ ಬಳಸಿಕೊಂಡು ಬಿಜೆಪಿಯಿಂದ ಪಾಲಿಕೆ ಸದಸ್ಯರಾದರು. ಇದೀಗ ಪೌರಕಾರ್ಮಿಕ ಆಗಿ ಕೆಲಸ ಮಾಡಿದ್ದ ಸವಿತಾ ಕಾಂಬಳೆ ಬೆಳಗಾವಿ ಮೇಯರ್ ಆಗಿ ಆಯ್ಕೆಯಾಗಿದ್ದಾರೆ.

ನೂತನ ಮೇಯರ್ ವಿವಿರ: ಬೆಳಗಾವಿ ಜಿಲ್ಲೆ ರಾಯಬಾಗ ತಾಲೂಕಿನ ಶಿರಗೂರ ಗ್ರಾಮದ ಸವಿತಾ ಕಾಂಬಳೆ ಎಂಬುವವರು ಕೂಲಿ ಮಾಡಿ ಬದುಕು ಕಟ್ಟಿಕೊಂಡಿದ್ದರು.

ಸಂಸಾರದ ಏರುಪೇರಿನಿಂದ ಬೆಳಗಾವಿ ಮಹಾನಗರ ಸೇರಿದ್ದ ಸವಿತಾ ಇಲ್ಲಿಯೇ ಮನೆಗಳಲ್ಲಿ ಕೆಲಸ ಮಾಡುತ್ತಾ ಬದುಕು ನಡೆಸಿದ್ದಳು. ಈ ಮಧ್ಯೆಯೇ ಸವಿತಾ ನಗರದ ಸರ್ದಾರ್ ಶಾಲೆಯಲ್ಲಿ ಎಸ್ ಎಸ್ ಎಲ್ ಸಿ ವರೆಗೆ ವಿಧ್ಯಾಭ್ಯಾಸ ಮಾಡಿದ್ದರು. ಬದುಕಿನ ಜಂಜಾಟಗಳ ಮಧ್ಯೆ ಬೆಳಗಾವಿ ಮಹಾನಗರ ಪಾಲಿಕೆ ಚುನಾವಣೆಗೆ ಸ್ಪರ್ಧೇ ಮಾಡಿದ ಸವಿತಾ ಅವರು ಪಾಲಿಕೆ ಸಧಸ್ಯೆಯಾಗಿ ಆಯ್ಕೆಯಾಗಿದ್ದರು. ನಮ್ಮನ್ನು ಗೆಲ್ಲಿಸಿದ ಜನರ ಸೇವೆ ಮಾಡುತ್ತಾ ರಾಜ–ಕೀಯವಾಗಿ ಬೆಳೆದ ಸವಿತಾ ಅವರಿಗೆ ಅಂಬೇಡ್ಕರ್ ಅವರ ತತ್ವ ಹಾಗೂ ಆದರ್ಶಗಳೇ ಬದುಕಿನ ದಾ–ರಿದೀಪವಾಗಿದೆ.

ಬೆಳಗಾವಿ–ತುಮಕೂರು ಜಿಲ್ಲೆಗಳ ವಿಭಜನೆ ಫಿಕ್ಸ್.?

ಬೆಳಗಾವಿ: ಇಂದು ಸಿಎಂ ಸಿದ್ದರಾಮಯ್ಯ ರಾಜ್ಯ ಸರ್ಕಾರದ ಪೂರ್ಣಾವಧಿ ಬಜೆಟ್ ಮಂಡನೆ ಮಾಡಲಿದ್ದಾರೆ. ಅಲ್ಲದೇ ಸಿದ್ದರಾಮಯ್ಯ ಅವರು ಮಂಡಿಸಲಿರುವ ದಾಖಲೆಯ 15ನೇ ಬಜೆಟ್ ಸಹ ಇದಾಗಿದೆ. ಬಜೆಟ್ನಲ್ಲಿ ಸರ್ಕಾರ ಹೊಸ ಜಿಲ್ಲೆಗಳನ್ನು ಘೋಷಣೆ ಮಾಡುವ ಸಾಧ್ಯತೆಗಳಿದ್ದು, ಬೆಳಗಾವಿ ಮತ್ತು ತುಮಕೂರು ಜಿಲ್ಲೆ ವಿಭಜನೆ ಫಿಕ್ಸ್ ಆಗುತ್ತಾ ಅನ್ನೋ ಪ್ರಶ್ನೆ ಎದ್ದಿದೆ.

ಬಜೆಟ್ನಲ್ಲಿ ರಾಜ್ಯದಲ್ಲಿ ಹೊಸ ಜಿಲ್ಲೆಗಳ ಘೋಷಿಸುವ ಸಂಭವವಿದ್ದು, ಅದರಲ್ಲಿ ದೊಡ್ಡ ಜಿಲ್ಲೆಗಳಾಗಿರುವ ಬೆಳಗಾವಿ ಜಿಲ್ಲೆ ವಿಭಜನೆ ಬಹುತೇಕ ಖಚಿತವಾಗಿದೆ. ಮತ್ತೊಂದು ದೊಡ್ಡ ಜಿಲ್ಲೆಯಾಗಿರುವ ತುಮಕೂರು ಸಹಾ ವಿಭಜನೆಯಾಗುವುದು ಬಹುತೇಕ ಖಚಿತ ಎನ್ನಲಾಗಿದೆ. ಫೆ.8 ರಂದು ಸರ್ಕಾರ ಹೊರಡಿಸಿದ್ದ ಸುತ್ತೋಲೆಯಲ್ಲಿ, ಈಗಿರುವ ಜಿಲ್ಲೆಗಳ ಮಿತಿಯನ್ನು ಪುನರ್ ರಚಿಸುವ ಬಗ್ಗೆ ಈ ಎರಡು ಜಿಲ್ಲೆಗಳ ಹೆಸರನ್ನು ಉಲ್ಲೇಖಿಸಲಾಗಿದೆ. ಬೆಳಗಾವಿ ಜಿಲ್ಲೆ ವಿಭಜಿಸಿ ಗೋಕಾಕ ಮತ್ತು ಚಿಕ್ಕೋಡಿ ಜಿಲ್ಲೆಗಳನ್ನು ಅಸ್ತಿತ್ವಕ್ಕೆ ತರಬಹುದು ಎಂಬ ಮಾತು ಬಲವಾಗಿ ಕೇಳಿ ಬರುತ್ತಿದೆ. ಅದೇ ರೀತಿ ತುಮಕೂರು ಜಿಲ್ಲೆ ವಿಭಜಿಸಿ ಮಧುಗಿರಿ ಅಥವಾ ಶಿರಾ ಜಿಲ್ಲೆ ರಚನೆ ಸಾಧ್ಯತೆ ಇದೆ.

ಇದೇ ಫೆಬ್ರವರಿ 8ರಂದು ರಾಜ್ಯ ಸರ್ಕಾರ ಹೊರಡಿಸಿದ್ದ ಸುತ್ತೋಲೆಯಲ್ಲಿ, ಅಸ್ತಿತ್ವದಲ್ಲಿ ಇರೋ ಜಿಲ್ಲೆಗಳ ಮಿತಿಯನ್ನು ಪುನರ್ ರಚಿಸುವ ಬಗ್ಗೆ ಉಲ್ಲೇಖಿಸಿತ್ತು. ನೋಂದಣಿ ಕಾಯ್ದೆ 1908 (ಕೇಂದ್ರ ಅಧಿನಿಯಮ 16, 1908) ಅಡಿಯಲ್ಲಿ ಜಿಲ್ಲೆಗಳ ಮಿತಿಯನ್ನು ಪುನರ್ ರಚಿಸುವ ಬಗ್ಗೆ ಉಲ್ಲೇಖಿಸಿತ್ತು. ಈ ಪೈಕಿ ರಾಜ್ಯದಲ್ಲಿ ದೊಡ್ಡ ಜಿಲ್ಲೆಗಳಾಗಿರುವ ಬೆಳಗಾವಿ ಹಾಗೂ ತುಮಕೂರು ಜಿಲ್ಲೆಗಳ ಹೆಸರನ್ನು ಉಲ್ಲೇಖಿಸಲಾಗಿತ್ತು. ಸದ್ಯ ಜಿಲ್ಲೆಗಳ ವಿಭಜನೆಯ ಸದ್ದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಪ್ರತ

ಮಾರುವೇಷದಲ್ಲಿ ಒಮ್ಮೆ ಬಿಡಿಎಗೆ ಹೋಗಿಬನ್ನಿ: ಸುಗ್ರೀವಾಜ್ಞೆ ಮೂಲಕ ಪ್ರಾಧಿಕಾರ ಮುಚ್ಚುವುದೇ ಲೇಸು; ಹೈಕೋರ್ಟ್

ಬೆಂಗಳೂರು: ನಿವೇಶನ ಹಂಚಿಕೆದಾರರು ಮತ್ತು ಬಿಡಿಎ ರೂಪಿಸಿದ ಬಡಾವಣೆಗಳಿಂದ ಭೂಮಿ ಕಳೆದುಕೊಂಡವರ ಸಂಕಷ್ಟವನ್ನು ಪರಿಗಣಿಸಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವನ್ನು ಸುಗ್ರೀವಾಜ್ಞೆ ಮೂಲಕ ಮುಚ್ಚುವುದೇ ಲೇಸು ಎಂದು ಹೈಕೋರ್ಟ್ ಮೌಖಿಕವಾಗಿ ಅಭಿಪ್ರಾಯಪಟ್ಟಿದೆ.

ಸರ್ ಎಂವಿ ಲೇಔಟ್‌ಗೆ ಪರಿಹಾರ ನೀಡದೆ ಬಿಡಿಎ 18 ಗುಂಟೆ ಜಮೀನು ಸ್ವಾಧೀನಪಡಿಸಿಕೊಂಡಿದೆ ಎಂದು ಮುದ್ದೇಗೌಡ ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ದಿನೇಶ್ ಕುಮಾರ್ ಮತ್ತು ನ್ಯಾಯಮೂರ್ತಿ ಟಿ.ಜಿ.ಶಿವಶಂಕರೇಗೌಡ ಅವರಿದ್ದ ವಿಭಾಗೀಯ ಪೀಠ ಈ ರೀತಿ ಅಭಿಪ್ರಾಯ ಪಟ್ಟಿದೆ.

ನ್ಯಾಯಾಲಯದ ಮೆಟ್ಟಿಲೇರಿದ್ದ ಬಿಡಿಎ ಆಯುಕ್ತ ಎನ್ .ಜಯರಾಂ ಅವರಿಗೆ ಜಮೀನು ಕಳೆದುಕೊಂಡವರ ಸಂಕಷ್ಟವನ್ನು ವಿವರಿಸಿದ ಮುಖ್ಯ ನ್ಯಾಯಮೂರ್ತಿ, 2003ರಲ್ಲಿ ಯಾವುದೇ ಸ್ವಾಧೀನ ಅಧಿಸೂಚನೆ ಹೊರಡಿಸದೆ ಭೂಮಿಯನ್ನು ಕಬಳಿಸಲಾಗಿದೆ. 2003ರಲ್ಲಿ ತಾನು 18 ಗುಂಟೆಗಳನ್ನು ಕಳೆದುಕೊಂಡಿದ್ದೇನೆ ಎಂದು ಭೂಮಾಲೀಕರು ಹೇಳಿದರೆ, ಬಿಡಿಎ ಕೇವಲ 15 ಗುಂಟೆ ತೆಗೆದುಕೊಂಡಿದೆ ಎಂದು ಹೇಳುತ್ತದೆ.

ನೀವು ಅವರಿಗೆ ಪರಿಹಾರವನ್ನು ನೀಡಬಹುದಿತ್ತು. ಈಗ 21 ವರ್ಷಗಳ ನಂತರ 2024 ರಲ್ಲಿ, ಬಿಡಿಎ ನಿಖರವಾದ ಭೂಮಿಯನ್ನು ಕಂಡುಹಿಡಿಯಲು ಸಮೀಕ್ಷೆಯನ್ನು ನಡೆಸಲು ಬಯಸಿದೆ.

ಹಾಗಿದ್ದಲ್ಲಿ, ಈ ದೇಶದಲ್ಲಿ ಒಬ್ಬ ನಾಗರಿಕ ಏನು ಮಾಡಬಹುದು? ನೀವು (ಕಮಿಷನರ್) ಭೂಮಾಲೀಕರಾಗಿದ್ದರೆ, ನೀವು ಏನು ಮಾಡುತ್ತೀರಿ ಎಂದು ಸಿಜೆ ಜಯರಾಮ್ ಅವರನ್ನು ನ್ಯಾಯಪೀಠ ಪ್ರಶ್ನಿಸಿತು.

21 ವರ್ಷ ಅಂದರೆ, ಸರಿ ಸುಮಾರು ಕಾಲು ಶತಮಾನದಷ್ಟು ಸಮಯವನ್ನು ಪರಿಹಾರಕ್ಕಾಗಿ ವ್ಯಕ್ತಿಯೊಬ್ಬರನ್ನು ಬಿಡಿಎ ಅಲೆಯುವಂತೆ ಮಾಡಲಾಗಿದೆ. ಆದರೂ, ಏಕೆ ಪರಿಹಾರ ನೀಡಿಲ್ಲ? ಎಂದು ಪ್ರಶ್ನಿಸಿತು. ಅಷ್ಟೇ ಅಲ್ಲದೆ, ಬಿಡಿಎ ಕಚೇರಿಗಳಲ್ಲಿ ಏನು ನಡೆಯುತ್ತಿದೆ ಎಂಬುದನ್ನು ತಿಳಿಯಲು ಮಾರು ವೇಷದಲ್ಲಿ ಒಮ್ಮೆ ಹೋಗಿ ಪರಿಶೀಲಿಸಿ. ಆಗ ಕಚೇರಿಯಲ್ಲಿ ಏನಾಗುತ್ತಿದೆ ಎಂಬುದು ತಿಳಿಯಲಿದೆ ಎಂದು ಬಿಡಿಎ ಆಯುಕ್ತರಿಗೆ ನ್ಯಾಯಪೀಠ ಸಲಹೆ ನೀಡಿತು.

ಸೇವಾಲಾಲರು ಸಮಾಜ ಸುಧಾರಕರು: ಮೇಯರ್ ಬಿ.ಶ್ವೇತ

ಬಳ್ಳಾರಿ: ಸೇವಾಲಾಲರು ತಮ್ಮ ಧನಾತ್ಮಕ ಚಿಂತನೆಗಳಿಂದ ಮೌಢ್ಯಗಳ ಬಗ್ಗೆ ಅರಿವು ಮೂಡಿಸಿದವರು. ಸಮುದಾಯದ ಜನರಿಗೆ ಜಾಗೃತಿ ಮೂಡಿಸುತ್ತಾ, ಪ್ರತಿಯೊಬ್ಬರೂ ಶಿಕ್ಷಣ ಪಡೆಯಬೇಕು ಎಂದು ಕರೆ ನೀಡುವ ಮೂಲಕ ಸಮಾಜ ಸುಧಾರಕರಾಗಿದ್ದರು ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಬಿ.ಶ್ವೇತ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣ ರಸ್ತೆಯ ವಾಲ್ಮೀಕಿ ಭವನದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಸಂತ ಸೇವಾಲಾಲ್ ಜಯಂತಿ ಕಾರ್ಯಕ್ರಮವನ್ನು ಸೇವಾಲಾಲ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಉದ್ಘಾಟಿಸಿ ಅವರು ಮಾತನಾಡಿದರು.

1739ರಲ್ಲಿ ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ಸೂರಗೊಂಡನಕೊಪ್ಪದಲ್ಲಿ ಭೀಮಾನಾಯ್ಕ ಮತ್ತು ಧರ್ಮಿಣಿ ಮಾತೆ ದಂಪತಿಯ ಮಗನಾಗಿ ಜನ್ಮತಾಳಿದ ಸಂತ ಸೇವಾಲಾಲ್ರು ಸೂರಗೊಂಡನಕೊಪ್ಪದಲ್ಲಿ ಅನೇಕ ಪವಾಡಗಳನ್ನು ನಡೆಸಿದ್ದಾರೆ ಎಂದು ತಿಳಿಸಿದರು.

ಸೇವಾಲಾಲರು ಒಬ್ಬ ದನಗಾಯಿ ಗೋಪಾಲಕನಾಗಿ ತಮ್ಮ ಜೀವನದ ಅನುಭವವನ್ನು ತಮ್ಮ ತತ್ವದ ಮೂಲಕ ಜನರಲ್ಲಿನ ಅಜ್ಞಾನವನ್ನು ದೂರ ಮಾಡಿದವರು.

ಅಷ್ಟೇ ಅಲ್ಲದೆ ಶಿಕ್ಷಣದ ಮಹತ್ವವನ್ನು ಸಾರುವ ಮೂಲಕ ಎಲ್ಲರೂ ಅಕ್ಷರ ಜ್ಞಾನವನ್ನು ಪಡೆದು ಜಗತ್ತಿಗೆ ದಾರಿ ದೀಪವಾಗಬೇಕು ಎಂದು ಸಾರಿದವರು ಎಂದರು.

ಸೇವಾಲಾಲರು ತಮ್ಮ ತತ್ವಗಳ ಮೂಲಕ ಲೋಕಕ್ಕೆ ಜ್ಞಾನದ ಮೂಲಕ ಮುಕ್ತಿ ಮಾರ್ಗ ತೋರಿಸಿದರು. ಸರ್ವರನ್ನು ಒಳಗೊಂಡ ಸಮ ಸಮಾಜದ ನಿರ್ಮಾಣ ಹಾಗೂ ಸರ್ವರಲ್ಲೂ ಸೋದರತೆಯ ಭಾವನೆಯನ್ನು ಮೂಡಲು ಪ್ರೇರೇಪಿಸಿದರು. ತನ್ನ ಸಮಾಜದ ಜನರ ಕಷ್ಟಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು ಎಂದು ಹೇಳಿದರು.

ಇಂತಹ ಮಹಾನ್ ಸಂತ ನಮ್ಮ ನಾಡಿನಲ್ಲಿ ನೆಲೆಸಿದ್ದರು ಎಂಬುದೇ ನಮಗೆ ಹೆಮ್ಮೆಯ ವಿಚಾರ. ಇವರಂತೆ ಹಲವು ಮಹನೀಯರ ವಿಚಾರಧಾರೆಗಳನ್ನು ನಾವುಗಳು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಅವರ ಜಯಂತಿಗಳು ಅರ್ಥಪೂರ್ಣವಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.

ಜಿಲ್ಲಾ ಆಸ್ಪತ್ರೆಯ ವೈದ್ಯಕೀಯ ದಾಖಲಾತಿ ವಿಭಾಗದ ಉಪಮುಖ್ಯ ವೈದ್ಯಾಧಿಕಾರಿಗಳಾದ ಡಾ.ಗುರುನಾಥ ಬಿ.ಚವ್ಹಾಣ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಸೇವಾಲಾಲರು ಸತ್ಯ, ಅಹಿಂಸೆ, ದಯೆ, ಕರುಣೆಗಳನ್ನು ಪಾಲಿಸುವ ಮೂಲಕ ಧರ್ಮಾತೀತರಾಗಿ ಎಂದು ಸಾರಿದವರು. ಇದಲ್ಲದೆ ಮಾನವ ಜನ್ಮ ಪವಿತ್ರವಾದದ್ದು ಇದನ್ನು ಹಾಳು ಮಾಡಿಕೊಳ್ಳಬೇಡಿ, ವ್ಯಸನಗಳಿಂದ ದೂರವಿರಿ, ಅರಿಷಡ್ ವರ್ಗಗಳನ್ನು ಸುಟ್ಟು ಹಾಕಿ, ಪ್ರಾಮಾಣಿಕರಾಗಿ ಜೀವಿಸಿ, ಕಷ್ಟದಲ್ಲಿ ಇರುವವರಿಗೆ ಸಹಾಯ ಮಾಡಿರಿ ಎಂದು ತಿಳಿಸಿದವರು ಎಂದರು.

ಸೇವಾಲಾಲರು ಅನೇಕ ಪವಾಡಗಳನ್ನು ಮಾಡಿದ್ದಾರೆ. ಬಂಡಿಯನ್ನು ನಗಾ-ರಿಯನ್ನಾಗಿ ಬಾರಿಸುವುದು, ಕೆಸರನ್ನು ಹುಗ್ಗಿ ಪಾಯಸವನ್ನಾಗಿಸುವುದು, ನೀರನ್ನು ತುಪ್ಪ ಮಾಡಿ ಯಜ್ಞ ಮಾಡುತ್ತಿದ್ದರು ಎನ್ನುವ ಪ್ರತೀತಿ ಇದೆ. ದೇವಿ ಮರಿಯಮ್ಮ ಅವರಿಂದ ದೊರೆತ ದಿವ್ಯಶಕ್ತಿಯನ್ನು ಬಂಜಾರರು ಸೇರಿ ಅಲೆಮಾರಿ ಜೀವನ ನಡೆಸುವ ಸಮುದಾಯಗಳನ್ನು ಉದ್ಧರಿಸಲು ಬಳಸಿದ ಸಂತ ಇವರು ಎಂಬ ಕಥ-'ಗಳು ಚಾಲ್ತಿಯಲ್ಲಿವೆ. ಮಹಾರಾಷ್ಟ್ರದ ಪೌರಾಗಢದಲ್ಲಿ (ಪೌರಾದೇವಿಯ ಸ್ಥಳ) ಸೇವಾಲಾಲರು ಐಕ್ಯರಾದರು ಎಂದು ಇತಿಹಾಸ ಹೇಳುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪಿಹೆಚ್ಡಿ ಪದವಿ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕೆ.ವಸಂತ್ ಕುಮಾರ್ ತಂಡದವರು ಸುಗಮ ಸಂಗೀತಗಳನ್ನು ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಮೇಯರ್ ಬಿ.ಜಾನಕಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇ-ರಿಯ ವಿಷಯ ಪರಿವೀಕ್ಷಕರಾದ ವೇದಾವತಿ.ಕೆ., ತಾರಾನಾಥ ಆಯುರ್ವೇದ ಮಹಾವಿದ್ಯಾಲಯದ ಪ್ರಾಧ್ಯಾಪಕರಾದ ರವಿ. ಬಿ ಚೌವ್ಹಾಣ್ ಸೇರಿದಂತೆ ಸಮಾಜದ ಮುಖಂಡರು, ಜನ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಸಂಭ್ರಮದ ಮೆರವಣಿಗೆ:

ಸಂತ ಸೇವಾಲಾಲ್ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ಸಂಭ್ರಮದಿಂದ ನಡೆಯಿತು.

ನಗರದ ಡಾ.ರಾಜ್ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದ ಆವರಣದಿಂದ ಆರಂಭಗೊಂಡ ಮೆರವಣಿಗೆಗೆ ಮಹಾನಗರ ಪಾಲಿಕೆಯ ಮೇಯರ್ ಬಿ.ಶ್ವೇತ ಅವರು ಸಂತ ಸೇವಾಲಾಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಚಾಲನೆ ನೀಡಿದರು.

ವಿವಿಧ ಕಲಾತಂಡಗಳು, ಲಂಬಾಣಿ ಕಸೂತಿಯ ವೇಷ ಧರಿಸಿದ ಮಹಿಳೆಯರು ಮೆರವಣಿಗೆಗೆ ಮೆರಗು ತಂದರು.

ಮೆರವಣಿಗೆಯು ಮುನಿಸಿಪಲ್ ಮೈದಾನದಿಂದ ಆರಂಭವಾಗಿ ಇಂದಿರಾ ವೃತ್ತ, ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೇ ಬ್ರೂಸ್ಪೇಟೆ ಪೊಲೀಸ್ ಠಾಣೆ, ತೇರು ಬೀದಿ, ಹೆಚ್.ಆರ್.ಗವಿಯಪ್ಪ ವೃತ್ತದ ಮಾರ್ಗವಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವಾಲ್ಮೀಕಿ ಭವನದ ವೇದಿಕೆ ಕಾರ್ಯಕ್ರಮದವರೆಗೆ ಸಾಗಿ ಬಂದಿತು.

ಸ್ಥಳ ಮಹಜರಿಗೆ ಕಬ್ಬಿನಾಲೆಗೆ ನಕ್ಸಲ್ ಶ್ರೀಮತಿಯನ್ನು ಕರೆತಂದ ಪೊಲೀಸರು

ಉಡುಪಿ: 2011ರ ಡಿಸೆಂಬರ್‌ನಲ್ಲಿ ಉಡುಪಿ ಜಿಲ್ಲೆ ಹೆಬ್ರಿಯ ಕಬ್ಬಿನಾಲೆ ಬಳಿ ನಡೆದಿದ್ದ ಸದಾಶಿವ ಗೌಡ ಎಂಬುವವರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಥಳ ಮಹಜರು ಮಾಡಲು ನಕ್ಸಲ್ ಮಹಿಳೆ ಶ್ರೀಮತಿ ಅಲಿಯಾಸ್ ಉಣ್ಣಿಮಯ ಅವರನ್ನು ಬಾಡಿ ವಾರೆಂಟ್ ಪಡೆದು ಕಬ್ಬಿನಾಲೆಗೆ ಕಾರ್ಕಳ ಪೊಲೀಸರು ಕರೆತಂದರು.

ನವೆಂಬರ್ 7, 2023 ರಂದು ನಕ್ಸಲ್ ಗುಂಪು ಸದಸ್ಯರು ಮತ್ತು ಪೊಲೀಸರ ನಡುವೆ ಗುಂಡಿನ ಚಕಮಕಿ ನಡೆದ ನಂತರ ಶೃಂಗೇರಿ ತಾಲೂಕಿನ ಬೆಳಗೋಡುಕೊಡಿಗೆಯ ಶ್ರೀಮತಿ ಮತ್ತು ತಮಿಳುನಾಡಿನ ಮತ್ತೊಬ್ಬ ನಕ್ಸಲ್ ಚಂದ್ರು ಅವರನ್ನು ಕೇರಳದ ವೈನಾಡಿನಲ್ಲಿ ಪೊಲೀಸರು ಬಂಧಿಸಿದ್ದರು. ಗುರುವಾರ ಶ್ರೀಮತಿ ಅವರನ್ನು ಕಾರ್ಕಳದ ನ್ಯಾಯಾಲಯಕ್ಕೆ ಕರೆತಂದಾಗ ಅವರು, ಮಾವೋವಾದ ಪರವಾಗಿ ಘೋಷಣೆ ಕೂಗಿದರು. 28 ವರ್ಷದ ಶ್ರೀಮತಿ ಕೇರಳದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದರು. ಫೆಬ್ರವರಿ 13 ರಂದು ರಾತ್ರಿ ಪೊಲೀಸರು ಬಿಗಿ ಭದ್ರತೆಯ ನಡುವೆ ಕಾರ್ಕಳಕ್ಕೆ ಕರೆತಂದರು. ಫೆ.14ರಂದು ಆಕೆಯನ್ನು ಕಾರ್ಕಳದ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿತ್ತು. ಕಾರ್ಕಳ ನ್ಯಾಯಾಲಯ ಆಕೆಯನ್ನು ಫೆಬ್ರವರಿ 17ರವರೆಗೆ ಪೊಲೀಸ್ ಕಸ್ಟಡಿಗೆ ಒಪ್ಪಿಸಿತ್ತು.

2011ರ ಡಿ.19ರಂದು ನಾಪತ್ತೆಯಾಗಿದ್ದ ತಿಂಗಳಮಕ್ಕಿಯ ಬಿದಿರು ಬುಟ್ಟಿ ನೇಯುವ ಸದಾಶಿವಗೌಡ ಅವರ ಮೃತದೇಹ 2011ರ ಡಿ.28ರಂದು ಪತ್ತೆಯಾಗಿ-ತ್ತು. ಸದಾಶಿವಗೌಡ ಪೊಲೀಸ್ ಮಾಹಿತಿ-ದಾರನೆಂದು ಶಂಕಿಸಲಾಗಿದ್ದು ಆತನನ್ನು ಗುರಿಯಾಗಿಸಲಾಗಿದೆ. ಸದಾಶಿವ ಗೌಡ ಅವರ ಮೃತದೇಹದ ಪಕ್ಕದಲ್ಲಿ 'ಪೊಲೀಸ್ ಮಾಹಿತಿದಾರರಿಗೆ ತಕ್ಕ ಶಿಕ್ಷೆಯಾಗಲಿದೆ-ಮಾವೋವಾದಿಗಳು ಎಂಬ ಪೋಸ್ಟರ್ ಇತ್ತು. 50 ವರ್ಷ ವಯಸ್ಸಿನ ಸದಾಶಿವ ಗೌಡ ಅವರ ಮೃತದೇಹ ಮರದ ಕೆಳಗೆ ಕುಳಿತ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಕೈಗಳನ್ನು ಕಾಂಡಕ್ಕೆ ಕಟ್ಟಲಾಗಿ-ತ್ತು.

ಸದಾಶಿವ ಗೌಡ ಅವರನ್ನು ಶ್ರೀಮತಿ ಒಳಗೊಂಡ ನಕ್ಸಲ್ ತಂಡ ಅಪಹರಿಸಿ ಹತ್ಯೆಗೈದಿರುವ ಶಂಕೆ ಪೊಲೀಸರಿಗೆ ವ್ಯಕ್ತವಾಗಿ-ತ್ತು. ಶ್ರೀಮತಿ ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ 15ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ. ಪುಟ್ಟೇಗೌಡ ಮತ್ತು ಗಿರಿಜಾ ಅವರ ಪುತ್ರಿ ಶ್ರೀಮತಿಗೆ ಒಬ್ಬ ಸಹೋದರಿ ಮತ್ತು ಇಬ್ಬರು ಸಹೋದರರು ಇದ್ದಾರೆ. 2009ರಲ್ಲಿ ತಣಿಕೋಡು ಅರಣ್ಯ ಇಲಾಖೆಯ ಚೆಕ್‌ಪೋಸ್ಟ್‌ಗೆ ಹಾನಿ ಮಾಡಿದ ಆರೋಪ ಹಾಗೂ ಶೃಂಗೇರಿಯ ಮಾಥೊಳ್ಳಿಯಲ್ಲಿ ಪೊಲೀಸರ ಮೇಲೆ ಮಾರಕಾಸ್ತ್ರಗಳನ್ನು ಎಸೆದು ಲೋಕಸಭೆ ಚುನಾವಣೆಯನ್ನು ಬಹಿಷ್ಕರಿಸುವಂತೆ ಜನರಿಗೆ ಕರೆ ನೀಡಿದ ಆರೋಪವೂ ಅವರ ಮೇಲಿದೆ.

ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ಸಿಎಂ ಸಿದ್ದರಾಮಯ್ಯ

ನವದೆಹಲಿ: ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಿದಕ್ಕೆ ತಮ್ಮ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣವನ್ನು ರದ್ದುಗೊಳಿಸುವಂತೆ ಸುಪ್ರೀಂ ಕೋರ್ಟ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅರ್ಜಿ ಸಲ್ಲಿಸಿದ್ದಾರೆ. ಫೆ.19 ರಂದು ಈ ಅರ್ಜಿ ವಿಚಾರಣೆಗೆ ಬರುವ ಸಾಧ್ಯತೆ ಇದೆ.

ಫೆಬ್ರವರಿ 2022 ರಲ್ಲಿ ಗುತ್ತಿಗೆದಾರ ಸಂತೋಷ್ ಅವರ ಆತ್ಮಹತ್ಯೆಯ ಹಿನ್ನಲೆಯಲ್ಲಿ ಅಂದಿನ ಸಚಿವ ಕೆಎಸ್ ಈಶ್ವರಪ್ಪ ಅವರ ರಾಜೀನಾಮೆ ಮತ್ತು ಬಂಧನಕ್ಕೆ ಒತ್ತಾಯಿಸಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಗಿತ್ತು. ಪ್ರತಿಭಟನೆ ವೇಳೆ ಮುಂಜಾಗ್ರತಾ ಕ್ರಮವಾಗಿ ಅವರನ್ನು ಬಂಧಿಸಿ ಕ್ರಿಮಿನಲ್ ಪ್ರಕರಣವನ್ನು ದಾಖಲಾಗಿಸಲಾಗಿತ್ತು.

ಕಳೆದ ವಾರ ಈ ಪ್ರಕರಣದ ವಿಚಾರಣೆ ನಡೆಸಿದ ಕರ್ನಾಟಕ ಹೈಕೋರ್ಟ್ ಸಿದ್ದರಾಮಯ್ಯ ಮತ್ತು ಇತರರ ವಿರುದ್ಧ ವಿಚಾರಣಾ ನ್ಯಾಯಾಲಯದ ವಿಚಾರಣೆಯನ್ನು ರದ್ದುಗೊಳಿಸಲು ನಿರಾಕ-ರಿಸಿತು ಮತ್ತು ಫೆಬ್ರವರಿ 26 ರಂದು ವಿಚಾರಣಾ ನ್ಯಾಯಾಲಯಕ್ಕೆ ಖುದ್ದು ಹಾಜರಾಗುವಂತೆಯೂ ಸೂಚಿಸಿತ್ತು.

ಇದನ್ನೂ ಓದಿ: ಚಲಿಸುತ್ತಿದ್ದ ರೈಲಿನಿಂದ ನದಿಗೆ ಹಾರಿ ಯುವತಿ ಆತ್ಮಹತ್ಯೆ

ಈ ಆದೇಶದ ವಿರುದ್ಧ ಮೇಲ್ಮನವಿ ಅರ್ಜಿ ಸಲ್ಲಿಸಿರುವ ಸಿಎಂ ಸಿದ್ದರಾಮಯ್ಯ, ಭಾರತೀಯ ದಂಡ ಸಂಹಿತೆಯ ಸೆಕ್ಷನ್ 141 (ಕಾನೂನುಬಾಹಿರ ಸಭೆ) ಯಾವುದೇ ಅಂಶಗಳನ್ನು ಪ್ರಕರಣದಲ್ಲಿ ಪೂರೈಸಲಾಗಿಲ್ಲ, ಮುಖ್ಯವಾಗಿ ಸಭೆ ಹಿಂಸಾಚಾರಕ್ಕೆ ಕಾರಣವಾಯಿತು ಎಂಬ ಯಾವುದೇ ಆರೋಪವಿಲ್ಲ, ದೂರುದಾರರು ರಾಜ-ಕೀಯ ವರಿಷ್ಠರ ಆದೇಶದ ಮೇರೆಗೆ ದೂರು ದಾಖಲಿಸಿರಬಹುದು ಎಂದು ಸಿದ್ದರಾಮಯ್ಯ ಅರ್ಜಿಯಲ್ಲಿ ಆರೋಪಿಸಿದ್ದಾರೆ.

ಕರ್ನಾಟಕ ಪೊಲೀಸ್ ಕಾಯ್ದೆಯ ಸೆಕ್ಷನ್ 103 ರ ಅಡಿಯಲ್ಲಿ ನಾವು ಯಾವುದೇ ಅಪರಾಧವನ್ನು ಮಾಡಿಲ್ಲ, ಸಾರ್ವಜನಿಕ ಸ್ಥಳಗಳಲ್ಲಿ ಟ್ರಾಫಿಕ್ ನಿಯಂತ್ರಿಸಲು ಅಥ-'ವಾ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ವಿಚಾರದಲ್ಲಿ ಆಯುಕ್ತರು ಅಥವಾ ಜಿಲ್ಲಾಧಿಕಾರಿಗಳು ಮಾಡಿದ ಆದೇಶಗಳನ್ನು ಉಲ್ಲಂಘಿಸಿದರೆ ದಂಡ ವಿಧಿಸಬಹುದು. ಹೀಗಾಗಿ ವಿಚಾರಣಾ ನ್ಯಾಯಾಲಯದಲ್ಲಿ ತಮ್ಮ ವಿರುದ್ಧದ ವಿಚಾರಣೆಯನ್ನು ರದ್ದುಗೊಳಿಸಲು ನಿರಾಕರಿಸಿದ ಕರ್ನಾಟಕ ಹೈಕೋರ್ಟ್ ತೀರ್ಪನ್ನು ರದ್ದುಗೊಳಿಸುವಂತೆ ಸಿದ್ದರಾಮಯ್ಯ ಅರ್ಜಿಯಲ್ಲಿ ಮನವಿ ಮಾಡಿದ್ದಾರೆ.

10 ವರ್ಷಗಳಲ್ಲಿ 11 ರೈಲು ತಂದಿದ್ದೀನಿ, ಮೈಸೂರು-ರಾಮೇಶ್ವರಂ 12ನೇ ರೈಲು ಬರಲಿದೆ: ಪ್ರತಾಪ್ ಸಿಂಹ

ಮೈಸೂರು: ನನ್ನ ಸಂಸದ ಸೇವೆ ಅವಧಿಯಲ್ಲಿ ಕರ್ನಾಟಕಕ್ಕೆ 11 ರೈಲು ಸೇವೆ ತರಿಸಿದ್ದೇನೆ. 2014ಕ್ಕೂ ಮೊದಲು ಒಂದು ರೈಲು ಬಂದಿಲ್ಲ. ಶೀಘ್ರದಲ್ಲೇ 12ನೇ ಮೈಸೂರು-ರಾಮೇಶ್ವರಂ ರೈಲು ಬರಲಿದೆ ಎಂದು ಮೈಸೂರು-ಕೊಡಗು ಕ್ಷೇತ್ರದ ಸಂಸದ ಪ್ರತಾಪ್ ಸಿಂಹ ಘೋಷಿಸಿದ್ದಾರೆ. ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಇಂದು ಮೈಸೂರು ಕೊಡಗು ಲೋಕಸಭಾ ಚುನಾವಣಾ ಕಾರ್ಯಾಲಯ ಉದ್ಘಾಟನೆ ಮಾಡಿದ ಅವರು, ಈ ವೇಳೆ ಮುಂದೆ ಬೆಂಗಳೂರು ಮೈಸೂರು ಮೆಟ್ರೋ ಬರಲಿದೆ ಎಂದರು. ಚುನಾವಣೆಗೆ ಹೋಗಬೇಕಾದರೆ ಏನು ಮಾಡುತ್ತೇವೆ? ಅಧಿಕಾರದಲ್ಲಿ ಇದ್ದಾಗ ಏನು ಮಾಡಿದ್ದೇವೆ. 10 ವರ್ಷದಲ್ಲಿ ನಾನು ಕೆಲಸ ಮಾಡಿದ ರಿಪೋರ್ಟ್ ಕಾರ್ಡ್ ನೀಡಿದ್ದೇನೆ. ಪ್ರಧಾನಿ ಮೋದಿ ಕೊಟ್ಟಿದ್ದೇನು? ಪ್ರತಾಪ್ ಸಿಂಹ ತಂದಿದ್ದೇನು? ಅನ್ನೋ ಬುಕ್‌ಲೆಟ್ ಇದರಲ್ಲಿ ಕೇಂದ್ರದ ಡಿಪಾಲ್ಟ್ ಯೋಜನೆ ಪಟ್ಟಿ ಇಲ್ಲಿ ಮಾಡಿಲ್ಲ. 2014ರ ಹಿಂದೆ ಒಂದು ಟ್ರೈನ್ ಬಂದಿಲ್ಲ. ನಾನು 11 ಟ್ರೈನ್ ತಂದಿದ್ದೇನೆ. 12ನೇ ರೈಲು ಸದ್ಯದಲ್ಲೇ ಬರಲಿದೆ ಎಂದು ತಿಳಿಸಿದರು.

ನೆರವು ಸಂಸ್ಥೆಯ ಸಿಬ್ಬಂದಿಗಳಿಗೆ 3 ದಿನಗಳ ಯೋಜನಾ ಪರಿಚಯ ತರಬೇತಿ

ಬೆಳಗಾವಿ: ನಿರಂತರ ನೀರು ಸರಬರಾಜು ಯೋಜನೆಯ ಕಲಬುರಗಿ

ಯೋಜನೆಗಳ ವ್ಯಾಪಕ ಪ್ರಚಾರ ಕೈಗೊಳ್ಳಿ; ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ

ಬೆಳಗಾವಿ: ರಾಜ್ಯದಲ್ಲಿ ಬೆಳಗಾವಿ ದೊಡ್ಡ ಜಿಲ್ಲೆಯಾಗಿದ್ದು, ಸಮಾಜ ಕಲ್ಯಾಣ ಇಲಾಖೆಯಿಂದ ಆಹ್ವಾನಿಸುವ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಹಾಗೂ ಇತರೆ ಯೋಜನೆಗಳಿಗೆ ಪರಿಶಿಷ್ಟ ಜಾತಿ ಮತ್ತು ಪಂಗಡದವರಿಂದ ಹೆಚ್ಚಿನ ಪ್ರಮಾಣದಲ್ಲಿ ಅರ್ಜಿಗಳು ಸ್ವೀಕರಿಸುವ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದರು.

ನಗರದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ ಗುರುವಾರ (ಫೆ.15) ನಡೆದ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ನಾಲ್ಕು ಇಲಾಖೆಗಳ ವ್ಯಾಪ್ತಿಯಲ್ಲಿನ ವಿದ್ಯಾರ್ಥಿ ನಿಲಯದ ಕಟ್ಟಡ ಕಾಮಗಾರಿ ಸ್ಥಗಿತ, ನಿವೇಶನ ಸಮಸ್ಯೆ ಹಾಗೂ ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ಇತರ ಯಾವುದೇ ರೀತಿಯ ಸಮಸ್ಯೆಗಳಿದ್ದಲ್ಲಿ ನನ್ನ ಗಮನಕ್ಕೆ ತರಬೇಕು. ಅವುಗಳನ್ನು ಪರಿಹರಿಸಲಾಗುವುದು. ಯಾವುದೇ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ನಿರ್ಲಕ್ಷತನ ವಹಿಸಿದ್ದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೆ ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

10ನೇ ತರಗತಿ ಪಾಸಾಗಿ ಹೊರಹೋಗುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಆ ವಿದ್ಯಾರ್ಥಿಗಳು ಮುಂದಿನ ವಿದ್ಯಾಭ್ಯಾಸದ ಆಯ್ಕೆಗಾಗಿ ಎಲ್ಲ ವಿದ್ಯಾರ್ಥಿ ನಿಲಯ, ವಸತಿ

ಶಾಲೆಗಳಲ್ಲಿ ಎಸ್ಸೆಸ್ಸೆಲ್ಸಿ ನಂತರದ ಮುಂದಿನ ವಿದ್ಯಾಭ್ಯಾಸದ ಬಗ್ಗೆ ಇರುವ ಅನುಕೂಲತೆಗಳ ಕುರಿತು ಒಂದು ಚಾರ್ಟ್ ನ್ನು ಪ್ರದರ್ಶಿಸಬೇಕು ಎಂದರು.

ರಾಮದುರ್ಗ ತಾಲೂಕಿನ ಬಟಕುರ್ಕಿಯ ಇಂದಿರಾ ಗಾಂಧಿ ವಸತಿ ಶಾಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಸಂಬಂಧಿಸಿದ ಅಧಿಕಾರಿಗಳು ಸಮಸ್ಯೆ ಬಗೆಹರಿಸಲು ತಾಲೂಕು ಆಡಳಿತದೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆ ಬಗೆಹರಿಸಲು ಕ್ರಮಕೈಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಕಳೆದ ಐದು ವರ್ಷಗಳಲ್ಲಿ ವಸತಿ ಶಾಲೆಗಳಲ್ಲಿ 10ನೇ ತರಗತಿ ಮಾಡಿದ ಪದವಿ ಪೂರ್ಣಗೊಳಿಸಿದವರು ಈಗ ಎಲ್ಲಿದ್ದಾರೆ. ಏನ್ನೂ ಮಾಡುತ್ತಿದ್ದಾರೆ. ಅವರ ಈಗಿನ ಸ್ಥಿತಿಗತಿ ಕುರಿತು ಮಾಹಿತಿ ಕಲೆಹಾಕಲು ಒಂದು ತಂಡ ರಚಿಸಬೇಕು.

ಈ ಮಾಹಿತಿಯನ್ನು ಮಾ.31 ರೊಳಗೆ ಸಲ್ಲಿಸುವಂತೆ ನಾಲ್ಕು ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ಸಂತ ಸೇವಾಲಾಲ್ ಜಯಂತಿ ಹಿನ್ನೆಲೆಯಲ್ಲಿ ಅವರ ಭಾವಚಿತ್ರಕ್ಕೆ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಲಕ್ಷ್ಮಣ ಬಬಲಿ ಜಂಟಿ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಬಸವರಾಜ ಕೊರಿಹುಲಿ ಜಿಲ್ಲಾ ಪರಿಶಿಷ್ಟ ವರ್ಗ ಕಲ್ಯಾಣ ಅಧಿಕಾರಿಗಳು, ಶಿವಪ್ರಿಯಾ ಕಡೆಚೂರ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗ ಕಲ್ಯಾಣ ಇಲಾಖೆ. ಮಿರಗಣ್ಣವರ ಜಿಲ್ಲಾ ಅಧಿಕಾರಿಗಳು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ. ಜಿಲ್ಲೆಯ ಎಲ್ಲ ತಾಲ್ಲೂಕಾ ಮಟ್ಟದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೆಶಕರು, ತಾಲ್ಲೂಕಾ ಮಟ್ಟದ ಪರಿಶಿಷ್ಠ ವರ್ಗ ಕಲ್ಯಾಣ ಅಧಿಕಾರಿಗಳು, ತಾಲ್ಲೂಕಾ ಮಟ್ಟದ ಹಿಂದುಳಿದ ವರ್ಗ ಕಲ್ಯಾಣ ಅಧಿಕಾರಿಗಳು ಹಾಗೂ ತಾಲ್ಲೂಕಾ ಮಟ್ಟದ ಅಲ್ಪ ಸಂಖ್ಯಾತರ ಕಲ್ಯಾಣ ಅಧಿಕಾ–ರಿಗಳು ಹಾಗೂ ಇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸಾಹಿತಿ ಹಸನ್ ನಯೀಂ ಸುರಕೋಡ ಅವರಿಗೆ "ಸಂಗೊಳ್ಳಿ ರಾಯಣ್ಣ" ಪ್ರಶಸ್ತಿ ಪ್ರದಾನ

ಬೆಳಗಾವಿ: ಗಡಿನಾಡಿನ ಗಟ್ಟಿ ಪ್ರತಿಭೆ ಎಂದೇ ಗುರುತಿಸಲಾಗುವ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾಗಿರುವ ಹಿರಿಯ ಸಾಹಿತಿ ಹಸನ್ ನಯೀಮ ಸುರಕೋಡ ಅವರ ಸಾಹಿತ್ಯ ಸಾಧನೆಯನ್ನು ಪರಿಗಣಿಸಿ ಕರ್ನಾಟಕ ಸರಕಾರವು 2021–22ನೇ ಸಾಲಿನ "ಸಂಗೊಳ್ಳಿ ರಾಯಣ್ಣ" ಪ್ರಶಸ್ತಿಯನ್ನು ನೀಡಿ ಗೌರವಿಸಿತು.

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಇತ್ತೀಚೆಗೆ ಮುಖ್ಯಮಂತ್ರಿಗಳು ವಿವಿಧ ಸಾಲಿನ ಪ್ರಶಸ್ತಿಗಳನ್ನು ಪ್ರದಾನ ಮಾಡಿದ್ದರು. ಆದರೆ ಅನಾರೋಗ್ಯದ ಕಾರಣದಿಂದ ಸಾಹಿತಿ ಹಸನ್ ನಯೀಂ ಸುರಕೋಡ ಅವರು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿರಲಿಲ್ಲ.

ಈ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಕೆ.ಎಚ್.ಚನ್ನೂರ ಹಾಗೂ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಅವರು ರಾಮದುರ್ಗದ

ಕುಂಬಾರಗಿರಿಯಲ್ಲಿರುವ ಸುರಕೋಡರ ನಿವಾಸಕ್ಕೆ ತೆರಳಿ "ಸಂಗೊಳ್ಳಿ ರಾಯಣ್ಣ" ಪ್ರಶಸ್ತಿಯನ್ನು ಪ್ರದಾನ ಮಾಡಿ ಫಲ–ಪುಷ್ಪ ಹಾಗೂ ಐದು ಲಕ್ಷ ರೂಪಾಯಿ ಚೆಕ್ ನೀಡಿ ಸನ್ಮಾನಿಸಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಸಾಹಿತಿ ಹಸನ್ ನಯೀಂ ಸುರಕೋಡ ಅವರು, ಅನಾರೋಗ್ಯ ಕಾರಣದಿಂದ ಬೆಂಗಳೂರಿಗೆ ತೆರಳಿ ಪ್ರಶಸ್ತಿ ಸ್ವೀಕರಿಸಲು ಸಾಧ್ಯವಾಗಿರಲಿಲ್ಲ. ತಮ್ಮ ಸಾಹಿತ್ಯ ಕೃಷಿಯನ್ನು ಗುರುತಿಸಿ ಪ್ರಶಸ್ತಿ ನೀಡಿರುವುದಕ್ಕೆ ಕರ್ನಾಟಕ ಸರಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಕೆ.ಎಚ್.ಚನ್ನೂರ ಹಾಗೂ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಎಸ್.ಜಿ.ಚಿಕ್ಕನರಗುಂದ, ಡಾ.ಎ.ಬಿ.ವಗ್ಗರ, ಪಾಂಡುರಂಗ ಜಟಗನ್ನವರ, ಎಂ.ಬಿ.ಪಾಟೀಲ, ಡಾ.ಡಿ.ಡಿ.ಮುಜಾವರ, ಸಂತೋಷ ವಾಲಿ, ಆರ್.ಕೆ.ಬಿಕ್ಕನ್ನವರ, ತುಕಾರಾಮ್ ಕರದಿನ ಹಾಗೂ ಸುರಕೋಡ ಅವರ ಕುಟುಂಬದ ಸದಸ್ಯರು ಈ ಸಂದರ್ಭದಲ್ಲಿ ಉಪಸ್ಥಿತ–ರಿದ್ದರು.

ಹಸನ್ ನಯೀಂ ಸುರಕೋಡ ಅವರು ಹಿಂದಿ ಹಾಗೂ ಇಂಗ್ಲಿಷ್ ಭಾಷೆಯ ಅನೇಕ ಶ್ರೇಷ್ಠ ಕೃತಿಗಳನ್ನು ಕನ್ನಡಕ್ಕೆ ಅನುವಾದಿಸಿದ್ದಾರೆ. ಇಂಗ್ಲಿಷ್, ಕನ್ನಡ, ಹಿಂದಿ ಉರ್ದು ಭಾಷೆಗಳಲ್ಲಿ ಪರಿಣಿತಿ ಹೊಂದಿರುವ ಅವರು, "ರಶೀದಿ ಟಿಕೆಟು" ಕೃತಿಗೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಸೇರಿದಂತೆ ಅನೇಕ ಪ್ರಶಸ್ತಿ ಹಾಗೂ ಗೌರವಗಳಿಗೆ ಪಾತ್ರರಾಗಿದ್ದಾರೆ.

ರಾಜ್ಯಸಭಾ ಸ್ಥಾನಕ್ಕೆ ಕಾಂಗ್ರೆಸ್‌ದಿಂದ ವೀರಶೈವ ಲಿಂಗಾಯತರಿಗೆ ಅನ್ಯಾಯ

ಬೆಳಗಾವಿ: ಸ್ವಾತಂತ್ರ್ಯ ಪೂರ್ವದಿಂದಲೂ ಕಾಂಗ್ರೆಸ್ ಪಕ್ಷವನ್ನು ವೀರಶೈವ ಲಿಂಗಾಯತ ಸಮುದಾಯವು ಪ್ರಬಲವಾಗಿ ಬೆಂಬಲಿಸುತ್ತಾ ಬಂದಿದೆ. ರಾಷ್ಟ್ರ ರಾಜಕಾರಣದಲ್ಲಿ ವೀರಶೈವ ಲಿಂಗಾಯತ ಸಮುದಾಯದ ಘಟಾನುಘಟಿಗಳನ್ನು ನೀಡಿದೆ. ಅನೇಕ ಹಿರಿಯ ರಾಜಕಾರಣಿಗಳು ಅಧಿಕಾರದ ಚುಕ್ಕಾಣೆಯನ್ನು ಹಿಡಿದು ರಾಷ್ಟ್ರ ರಾಜ–ಕಾರಣದಲ್ಲಿ ಅಚ್ಚಳಿಯದ ಛಾಪು ಮೂಡಿಸಿದ್ದನ್ನು ಅವಲೋಕಿಸಬಹುದು. ಆದರೆ ಇತ್ತೀಚಿನ ಕೆಲವು ದಶಕಗಳಿಂದ ನಮ್ಮ ಸಮುದಾಯದವರನ್ನು ಕಾಂಗ್ರೆಸ್ ಕಡೆಗಣಿಸಿದೆ ಎಂದುಬೆಳಗಾವಿ ವೀರಶೈವ ಲಿಂಗಾಯತ ಮಹಾಸಭೆ ಜಿಲ್ಲಾ ಘಟಕದ ಅಧ್ಯಕ್ಷೆ ರತ್ನಪ್ರಭಾ ಬೆಲ್ಲದ ಅವರು ತೀವ್ರವಾಗಿ ಖಂಡಿಸಿದ್ದಾರೆ. ವಿಧಾನಸಭೆ ಹಾಗೂ ಲೋಕಸಭೆಗಳ ಚುನಾವಣೆಗಳಲ್ಲಿ ಲಿಂಗಾಯತ ಸಮುದಾಯದವರ ಮತಗಳು ಬೇಕು ಆದರೆ ಅಭ್ಯರ್ಥಿಗಳ ಆಯ್ಕೆಯ ಸಂದರ್ಭದಲ್ಲಿ ಲಿಂಗಾಯತರನ್ನು ಕಡೆಗಣಿಸುತ್ತಾ ಬಂದಿರುವುದು ವಿಪರ್ಯಾಸದ ಸಂಗತಿಯಾಗಿದೆ.

ರಾಜಕೀಯ ಬೆಳವಣಿಗೆಯಲ್ಲಿ ವೀರಶೈವ ಲಿಂಗಾಯತರ ನಾಯಕತ್ವವನ್ನು ರಾಷ್ಟ್ರ ಮತ್ತು ರಾಜ್ಯಮಟ್ಟದಲ್ಲಿ ಕಡೆಗಣಿಸುತ್ತಾ ಬಂದಿದ್ದರ ಫಲವಾಗಿಯೇ ಕಾಂಗ್ರೆಸ್ ಪಕ್ಷವು ತನ್ನ ಅಸ್ತಿತ್ವಕ್ಕೆ ಧಕ್ಕೆ ತಂದುಕೊಂಡಿದೆ. ಸದ್ಯ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವು ಅಸ್ತಿತ್ವಕ್ಕೆ ಬಂದಿದ್ದರೆ ಲಿಂಗಾಯತ ಸಮುದಾಯದವರ ಬೆಂಬಲದಿಂದ ಎಂಬುದನ್ನು ಮರೆಯಬೇಕಾಗಿಲ್ಲ. ಸದ್ಯ ರಾಜ್ಯಸಭಾ ಚುನಾವಣಾ ಸ್ಥಾನಕ್ಕೆ ಕಾಂಗ್ರೆಸ್‌ನ ಮೂವರು ಅಭ್ಯರ್ಥಿಗಳಲ್ಲಿ ಒಬ್ಬರೂ ವೀರಶೈವ ಲಿಂಗಾಯತ ಸಮುದಾಯದವರು ಇಲ್ಲದಿರುವುದು ವಿಷಾದದ ಹಾಗೂ ಬೇಸರದ ಸಂಗತಿಯಾಗಿದೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಆಗಲಿ ಬಿಜೆಪಿ ಪಕ್ಷದವರಾಗಲಿ ಲಿಂಗಾಯತ ಅಭ್ಯರ್ಥಿಗಳನ್ನು ಕಡೆಗಣಿಸಿದರೆ ನಮ್ಮ ಸಮುದಾಯದವರು ತಕ್ಕಪಾಠವನ್ನು ಕಲಿಸಬೇಕಾಗುತ್ತದೆ.ಸದ್ಯ ಆಗಿರುವ ನ್ಯೂನತೆಗಳನ್ನು ಸರಿಪಡಿಸಿ ಕೊಂಡು ಸಮುದಾಯದವ–ರಿಗೆ ಅವಕಾಶವನ್ನು ಆದ್ಯತೆ ಯನ್ನು ಕಲ್ಪಿಸಿ ಕೊಡಬೇಕೆಂದು ರಾಜಕೀಯ ಪಕ್ಷಗಳಿಗೆ ಬೆಳಗಾವಿ ಜಿಲ್ಲಾ ಘಟಕದ ಮಹಾ ಸಭೆಯಿಂದ ಒತ್ತಾಯಿಸಿದ್ದಾರೆ.

ವೇದಾಂತ ರಿಸೋರ್ಸಸ್ ಮರುಪಾವತಿ ಪೂರ್ಣ

ಹುಬ್ಬಳ್ಳಿ: ವೇದಾಂತ ರಿಸೋರ್ಸಸ್ ಲಿಮಿಟೆಡ್ ಫೆಬ್ರವರಿ 7,2024 ರಂದು ತನ್ನ ಬಾಂಡ್ ಹೊಂದಿರುವವರಿಗೆ ಮರುಪಾವತಿಯನ್ನು ಪೂರ್ಣಗೊಳಿಸಿದೆ ಎಂದು ಘೋಷಿಸಿತು, ಈ ವರ್ಷದ ಆರಂಭದಲ್ಲಿ ಸ್ವೀಕರಿಸಿದ ಒಪ್ಪಿಗೆಗಳಿಗೆ ಅನುಗುಣವಾಗಿ $3.2 ಬಿಲಿಯನ್ ಮೌಲ್ಯದ ಬಾಂಡ್ ಗಳ ಮೆಚ್ಯೂರಿಟಿಗಳನ್ನು 2029 ಕ್ಕೆ ಯಶಸ್ವಿಯಾಗಿ ವಿಸ್ತ–ರಿಸಲಾಗಿದೆ.

ಈ ಪ್ರಕ್ರಿಯೆಯು ಪೂರ್ಣಗೊಳ್ಳುವುದರೊಂದಿಗೆ, ವಿಆರ್‌ಎಲ್ ನಲ್ಲಿನ ಸಾಲದ ಮೆಚ್ಯೂರಿಟಿಗಳು ಹೆಚ್ಚು ಸಮವಾಗಿ ಹರಡುತ್ತಿವೆ ಎಂಬುದನ್ನು ತಿಳಿಸಲು ವಿಆರ್‌ಎಲ್ ಸಂತೋಷವಾಗಿದೆ, ಇದು ಈ ಪ್ರಕ್ರಿಯೆಯ ನಮ್ಮ ಮುಖ್ಯ ಉದ್ದೇಶವಾಗಿದೆ.

ನಿಮಗೆ ತಿಳಿದಿರುವಂತೆ, ವೇದಾಂತ ಸಮೂಹವು ಕಳೆದ ವರ್ಷ ಸೆಪ್ಟೆಂಬರ್ ನಲ್ಲಿ ಗಮನಾರ್ಹವಾದ ವಿಭಜನೆ ಮತ್ತು ಮರುಸಂಘಟನೆಯ ಯೋಜನೆಯನ್ನು ಘೋಷಿಸಿತು. ಇದು ವೇದಾಂತ ಸಮೂಹವನ್ನು 17 ಪ್ರಮುಖ ಉದ್ಯಮಗಳಲ್ಲಿ ಮರುಸಂಂ–ಘೋಜಿಸಲಿದೆ. ಪ್ರತಿಯೊಂದು ವ್ಯವಹಾರವು ವಿಶ್ವ ದರ್ಜೆಯ ನಿರ್ವಹಣಾ ನಾಯಕತ್ವವನ್ನು ಹೊಂದಿದೆ, ಇತ್ತೀಚಿನ ಅತ್ಯಾಧುನಿಕ ತಂತ್ರಜ್ಞಾನಗಳನ್ನು ಬಳಸುವುದರಿಂದ ಆಮದು ಪರ್ಯಾಯ ಮತ್ತು ದೇಶೀಯ ಬೇಡಿಕೆಯನ್ನು ಪೂರೈಸುವುದು ಪ್ರಮುಖ ಪ್ರತಿಪಾದನೆಯಾಗಿದೆ. ಅವು ಸಾಂಸ್ಥಿಕ ಮತ್ತು ಚಿಲ್ಲರೆ ಹೂಡಿಕೆದಾರ–ರಿಗೆ ಉತ್ತಮ ಗುಣಮಟ್ಟದ ಮತ್ತು ವೈವಿಧ್ಯಮಯ ಹೂಡಿಕೆ ಅವಕಾಶಗಳನ್ನು ಸಹ ನೀಡುತ್ತವೆ. ಅನುಷ್ಠಾನದ ಪ್ರಗತಿಯನ್ನು ನಾವು ಸಕಾಲದಲ್ಲಿ ನವೀಕರಿಸುತ್ತೇವೆ.

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ: ಸಾಲ ಸೌಲಭ್ಯ ಪಡೆಯಲು ಅರ್ಜಿ ಅಹ್ವಾನ

ಬಳ್ಳಾರಿ: ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2023–24ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಮತೀಯ ಅಲ್ಪಸಂಖ್ಯಾತರಿಂದ (ಅಂ–ದರೆ ಮುಸ್ಲಿಂ, ಕ್ರಿಶ್ಚಿಯನ್, ಜೈನರು, ಬೌದ್ಧರು, ಸಿಖ್ಖರು, ಪಾರ್ಸಿಗಳು ಜನಾಂಗದವರಿಂದ) ಆನ್–ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ)ದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

"ಸ್ವಯಂ ಉದ್ಯೋಗ" ಸಾಲ ಸಹಾಯಧನ ಯೋಜನೆಯಲ್ಲಿ ರಾಷ್ಟ್ರೀಕೃತ ಬ್ಯಾಂಕುಗಳ ಸಹಯೋಗದೊಂದಿಗೆ ಘಟಕ ವೆಚ್ಚದ ಶೇ.33 ಅಥವಾ ಗರಿಷ್ಟ ಮಿತಿ ರೂ.1 ಲಕ್ಷ ಸಹಾಯಧನ ನೀಡಲಾಗುವುದು.

ಅರ್ಹತೆಗಳು:

ಅರ್ಜಿದಾರರು ಬಳ್ಳಾರಿ ಜಿಲ್ಲೆಯಲ್ಲಿ ಕನಿಷ್ಠ 15 ವರ್ಷದಿಂದ ಖಾಯಂ ನಿವಾಸಿಯಾಗಿರಬೇಕು. ಸ್ವಯಂ ಉದ್ಯೋಗ ಯೋಜನೆಗೆ ಅರ್ಜಿದಾರರ ಕುಟುಂಬದ ವಾರ್ಷಿಕ ಆದಾಯ ಗ್ರಾಮಾಂತರ ಪ್ರದೇಶದವರಿಗೆ ರೂ.81 ಸಾವಿರ ಮತ್ತು ನಗರ ಪ್ರದೇಶದವರಿಗೆ ರೂ.1.03 ಲಕ್ಷ ಮೀರಬಾರದು. ಅರ್ಜಿದಾರರು ವಯಸ್ಸು ಕನಿಷ್ಠ 18 ವರ್ಷ ಮತ್ತು ಗರಿಷ್ಠ 55 ವರ್ಷ ಹೊಂದಿರಬೇಕು. ಶೇ.33ರಷ್ಟು ಮಹಿಳೆಯರಿಗೆ ಮತ್ತು ಶೇ.3ರಷ್ಟು ಅಂಗವಿಕಲರಿಗೆ ಮೀಸಲಾತಿ ಇರುತ್ತದೆ. ಅರ್ಜಿದಾರರು ತಮ್ಮ ಅರ್ಜಿಯೊಂದಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ರೇಷನ್ ಕಾರ್ಡ, ಆಧಾರ್ ಕಾರ್ಡ, ಗುರುತಿನ ಚೀಟಿ, ಬ್ಯಾಂಕ್ ಖಾತೆ ಪುಸ್ತಕ ಪ್ರತಿ, ಯೋಜನಾ ವರದಿ ಹಾಗೂ ಅರ್ಜಿದಾರರ ಹಾಗೂ ಜಾಮೀನುದಾರರ 2 ಭಾವಚಿತ್ರಗಳು ನೀಡಬೇಕು. ಈ ಹಿಂದೆ ನಿಗಮದ ಸೌಲಭ್ಯವನ್ನು ಪಡೆದವರು ಮತ್ತೆ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. ಅರ್ಜಿ ಸಲ್ಲಿಸಲು ಆನ್–ಲೈನ್ https://kmdconline.karnataka.gov.in/ ಗೆ ಭೇಟಿ ನೀಡಬಹುದು. ಅರ್ಜಿ ಸಲ್ಲಿಸಲು ಫೆ.29 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಂಟೋನ್ಮೆಂಟ್ನ ವಿಜಯ ನಗರ ಕಾಲೋನಿಯ ಹಳೇ ಮಾರುಕಟ್ಟೆ ರಸ್ತೆಯ ನಳಂದ ಕಾಲೇಜ್ ಪಕ್ಕದ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಅಥವಾ ದೂ.08392–294730 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾವನೆಗಳನ್ನು ಅರ್ಥಮಾಡಿಕೊಳ್ಳುವಲ್ಲಿ ವಿಫಲವಾದ ಜೋಡಿಗಳಲ್ಲಿ ವಿಚ್ಛೇದನಗಳು ಹೆಚ್ಚಾಗುತ್ತಿವೆ: ಸಂತೋಷ ಹೆಗಡೆ

ಬೆಂಗಳೂರು: ಪರಸ್ಪರ ಭಾವನೆಗಳನ್ನು ಅರ್ಥಮಾಡಿಕೊಳ್ಳುವಲ್ಲಿ ವಿಫಲವಾದ ಜೋಡಿಗಳಲ್ಲಿ ವಿಚ್ಛೇದನಗಳು ಇತ್ತೀಚೆಗೆ ಹೆಚ್ಚಾಗುತ್ತಿರುವುದು ಆಂತಕಕಾರಿ ಸಂಗತಿ ಎಂದು ಮಾಜಿ ಲೋಕಾಯುಕ್ತ ಸಂತೋಷ ಹೆಗಡೆ ಹೇಳಿದರು.

ಬೆಂಗಳೂರಿನ ನಯನ ಸಭಾಂಗಣದಲ್ಲಿ ಬುಧವಾರ ಪ್ರೇಮಿಗಳ ದಿನಾಚರಣೆ ಪ್ರಯುಕ್ತ ಪತ್ರಕರ್ತ ಲೇಖಕ ಉಜ್ಜಿನಿ ರುದ್ರಪ್ಪರವರು ರಚಿಸಿರುವ ಪ್ರೀತಿಸಿ ಮದುವೆಯಾದ ಜೋಡಿಗಳ ನೈಜ ಘಟನೆಗಳನ್ನ ಒಳಗೊಂಡ ಪ್ರೀತಿಯನ್ನು ಹಂಬಲಿಸಿ ಕೃತಿ ಲೋಕಾರ್ಪಣೆ ಮಾಡಿ ಮಾತನಾಡಿದರು.

ಪ್ರೀತಿಸಿ ಮದುವೆಯಾದ ಜೋಡಿಗಳಲ್ಲಿ

ಪರಸ್ಪರ ಏನಾದರೂ ಸಮಸ್ಯೆಗಳು ಉದ್ಭವಿಸಿದರೆ ಈ ಪುಸ್ತಕವನ್ನು ಓದಿದರೆ ಉತ್ತಮ ಸಂಸಾರ ಮಾಡುವುದರಲ್ಲಿ ಎರಡು ಮಾತಿಲ್ಲ ಎಂದರು.

ನಾನು ಪಂಜಾಬಿ ಹುಡುಗಿಯರನ್ನು ಪ್ರೀತಿಸಿ ಮದುವೆಯಾಗಿ 54 ವರ್ಷವಾದರೂ ಇಂದಿಗೂ ಅನೂನ್ಯವಾಗಿದ್ದೇವೆ. ಜೋಡಿಗಳಲ್ಲಿ ನಂಬಿಕೆ ಬಹಳ ಮುಖ್ಯ. ಪ್ರೀತಿ ಎಂದರೆ ಕೇವಲ ದೈಹಿಕ ಸಂಪರ್ಕ ಅಷ್ಟೆ ಅಲ್ಲ ಅದು ಮನಸ್ಸುಗಳ ಬೆಸುಗೆ ಎಂದರು.

ವಿಮರ್ಶಕ ಕವಿ. ಎಲ್.ಎನ್. ಮುಕುಂದರಾಜ್ ಕೃತಿ ಕುರಿತು ಮಾತನಾಡಿ ಪ್ರೀತಿಸಿ ಮದುವೆಯಾಗುವ ಪ್ರಕರಣ ನಿನ್ನೆ ಮೊನ್ನೆಯದಲ್ಲ. ಈ ಜಗತ್ತು ಹುಟ್ಟಿದಾಗಿನಿಂದ ಪ್ರೀತಿ ಹುಟ್ಟಿದೆ. ಭೂಮಿ ಇರುವ ತನಕವೂ ಇರುತ್ತದೆ ಎಂದ ಅವರು ಕೃತಿಯಲ್ಲಿನ ಜೋಡಿಗಳ ಬದುಕಿನ ಘಟನಾವಳಿಗಳನ್ನು ವಿವ–ರಿಸಿದರು.

ಮಾಜಿ ಸಚಿವ ಎಚ್

ತೋಟಗಾರಿಕೆ ಇಲಾಖೆ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024–25ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ತೋಟಗಾರಿಕೆ ಬೆಳೆಗಳಾದ ಬಾಳೆ, ದ್ರಾಕ್ಷಿ, ದಾಳಿಂಬೆ, ಮಾವು, ಅಂಜೂರ, ಡ್ರಾಗನ್ ಹಣ್ಣು, ಗೇರು, ಸ್ಟ್ರಾಬೇರಿ, ಜಾಮುನು, ಪೇರಲ, ಬೆಣ್ಣೆ ಹಣ್ಣು, ಹೈಬ್ರಿಡ್ ತರಕಾರಿ ಹಾಗೂ ವಿವಿಧ ಹೂವು ಬೆಳೆಗಳ ಮೇಲೆ ಸಹಾಯಧನವನ್ನು ನೀಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ಬೆಳೆಗಳ ಅನುಗುಣವಾಗಿ ರೂ. 10,000 ಗಳಿಂದ ರೂ. 30,000 ಪ್ರತಿ ಹೆಕ್ಟೇರ್ ಸಹಾಯಧನವನ್ನು ಹಾಗೂ ನೀರಾವರಿ ವ್ಯವಸ್ಥೆಗಾಗಿ ಸಮುದಾಯ ಕೃಷಿ ಹೊಂಡಕ್ಕೆ ರೂ. 4.00 ರಿಂದ 5.32 ಲಕ್ಷಗಳ ವರೆಗೆ ಹಾಗೂ ವೈಯಕ್ತಿಕ ಕೃಷಿಹೊಂಡಕ್ಕೆ ರೂ. 75,000 ಗಳ ಸಹಾಯಧನ ನೀಡಲಾಗುವುದು.

ಸಂರಕ್ಷಿತ ಬೇಸಾಯ ಪದ್ಧತಿ ಅಳವಡಿಸಿಕೊಂಡು ಪಾಲಿಮನೆ ನಿರ್ಮಿಸಲು ಪ್ರತಿ 10 ಗುಂಟೆಗೆ ರೂ. 4.70 ಲಕ್ಷಗಳ ಹಾಗೂ ಪ್ಲಾಸ್ಟಿಕ್ ಹೊದಿಕೆಗಾಗಿ ರೂ. 16,000 ಪ್ರತಿ ಹೆಕ್ಟೇರ್‌ರಂತೆ ಸಹಾಯಧನವನ್ನು ನೀಡಲಾಗುವುದು.

ಅಷ್ಟೇ ಅಲ್ಲದೆ ಕೋಯ್ಲೊತ್ತರ ನಿರ್ವಹಣೆಗಾಗಿ ಪ್ಯಾಕ್‌ಹೌಸ್ ನಿರ್ಮಿಸಿಕೊಳ್ಳಲು ಗರಿಷ್ಠ 2 ಲಕ್ಷ, ಪ್ರಾಥಮಿಕ ಸಂಸ್ಕರಣಾ ಘಟಕ ನಿರ್ಮಿಸಲು ಗರಿಷ್ಠ 10 ಲಕ್ಷ, ಹಣ್ಣು ಮಾಗಿಸುವ ಘಟಕಕ್ಕೆ ಪ್ರತಿ ಟನ್‌ಗೆ ರೂ. 35,000 ರಂತೆ ಗರಿಷ್ಠ 300 ಟನ್ ಸಾಮರ್ಥ್ಯದ ವರೆಗೆ ಪ್ರತಿ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುವುದು. ತರಕಾರಿ ಮತ್ತು ಹಣ್ಣು ಮಾರಾಟ ಮಾಡಲು ತಳ್ಳುವ ಗಾಡಿಗೆ ರೂ. 15,000 ಸಹಾಯಧನವನ್ನು ಮಾರ್ಗಸೂಚಿಯನ್ವಯ ವೆಚ್ಚವನ್ನು ಪರಿಗಣಿಸಿ ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ತಮ್ಮ ತಾಲೂಕಿನ ತೋಟಗಾರಿಕೆ ಇಲಾಖೆಗೆ ಬೇಟಿ ನೀಡಿ ಹೆಚ್ಚಿನ ಮಾಹಿತಿ ಪಡೆದುಕೊಂಡು ಅರ್ಜಿ ಸಲ್ಲಿಸಲು ಬೆಳಗಾವಿ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಲಾಶಯಗಳಲ್ಲಿ ನೀರಿನ ಪ್ರಮಾಣ ಕ್ರಮೇಣ ಕಡಿಮೆ: ಸಾರ್ವಜನಿಕರು ನೀರು ಮಿತವಾಗಿ ಬಳಸಲು ಕೋರಿಕೆ

ಬೆಳಗಾವಿ: ಬೆಳಗಾವಿ ನಗರಕ್ಕೆ ನೀರು ಸರಬರಾಜು ಮಾಡುವ ಹಿಡಕಲ್ ಜಲಾಶಯ ಹಾಗೂ ರಕ್ಕಸಕೊಪ್ಪದಲ್ಲಿ ನೀರಿನ ಸಂಗ್ರಹದ ಪ್ರಮಾಣ ಮಳೆ ಬಾರದೆ ಕಡಿಮೆಯಾಗುತ್ತಿದೆ. ಆದರಿಂದ ದಿನ ನಿತ್ಯದ ನೀರಿನ ಮಟ್ಟ ಕ್ರಮೇಣ ಇಳಿಕೆಯಾಗುತ್ತಿರುವುದರಿಂದ ಬೇಸಿಗೆ ಕಾಲದಲ್ಲಿ ನೀರನ ಬೇಡಿಕೆಗೆ ಅನುಗುಣವಾಗಿ ಪೂರೈಸಲು ತೊಂದರಯಾಗಬಹುದಾಗಿದೆ.

ಆದ್ದರಿಂದ ನೀರು ಅಮೃತವಾದ ಸಂಪನ್ಮೂಲ. ಅಗತ್ಯಕ್ಕೆ ಅನಗುಣವಾಗಿ ನೀರುನ್ನು ನ್ಯಾಯೋಚಿತವಾಗಿ ಬಳಕೆ ಮಾಡುವ ಜವಾಬ್ದಾರಿ ಎಲ್ಲ ನಾಗರಿಕರದ್ದಾಗಿದೆ.

ಸಾರ್ವಜನಿಕರು ಈಗಿನಿಂದಲೇ ನೀರನ್ನು ಮಿತವಾಗಿ ಬಳಸಿ, ನೀರನ್ನು ಪೋಲು ಮಾಡದೇ. ಬರುವ ಬೇಸಿಗೆಯನ್ನು ಎದುರಿಸಲು ಮಹಾನಗರ ಪಾಲಿಕೆಗೆ ಸಹಕರಿಸಿಬೇಕು ಎಂದು ಮಹಾನಗರ ಪಾಲಿಕೆಯ ಪರವಾಗಿ ಕೆಯುಐಡಿಎಫ್‌ಸಿ ಅಧೀಕ್ಷಕ ಅಭಿಯಂತರರಾದ ಅಶೋಕ ಬುರಕುಲೆರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯಮಟ್ಟದ ಬೃಹತ್ ಉದ್ಯೋಗಮೇಳ ಯಶಸ್ವಿಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು: ಅಪರ ಜಿಲ್ಲಾಧಿಕಾರಿ ವಿಜಕುಮಾರ ಹೋನಕೇರಿ

ಬೆಳಗಾವಿ: ಸನ್ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ 'ಯುವ ಸಮೃದ್ಧಿ ಸಮ್ಮೇಳನ'ದ ಅಡಿಯಲ್ಲಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆಬ್ರುವರಿ 26 ಮತ್ತು 27 ರಂದು ರಾಜ್ಯ ಮಟ್ಟದ "ಬೃಹತ್ ಉದ್ಯೋಗ ಮೇಳ"ವನ್ನು ಆಯೋಜಿಸಲಾಗಿದೆ. ಇದರಲ್ಲಿ ಕಂಪನಿಗಳು, ಹಾಗೂ ಉದ್ಯೋಗಾಕಾಂಕ್ಷಿಗಳು ಪಾಲ್ಗೊಳ್ಳಲು ಸಮಿತಿ ಸಭೆಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ವಿಜಕುಮಾರ ಹೋನಕೇರಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಗುರುವಾರ (ಫೆ.15) ನಡೆದ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನದ ಕುರಿತು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಆಯೋಜಿಸಲಾದ ರಾಜ್ಯಮಟ್ಟದ ಬೃಹತ್ ಉದ್ಯೋಗ ಮೇಳ ಯಶಸ್ವಿಗೆ ಸಂಬಂಧಿಸಿದ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿರುವ ವಿವಿಧ ಪದವಿ ಪೂರ್ವ, ಪದವಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಈ ಕುರಿತು ಮಾಹಿತಿ ನೀಡಬೇಕು. ಅದೇ ರೀತಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಾದ, ಪಟ್ಟಣ ಪಂಚಾಯಿತಿ, ನಗರ ಸಭೆ, ಪುರ ಸಭೆಗಳಲ್ಲಿ ವಾಹನಗಳ ಮೂಲಕ ಪ್ರಚಾರ ಕೈಗೊಳ್ಳಬೇಕು.

ಜಿಲ್ಲಾಡಳತದಿಂದ ಕೂಡ ಸಾಮಾಜಿಕ ಜಾಲತಾಣದಲ್ಲಿ ಪ್ರಚಾರ ಮಾಡಲಾಗುವುದು. ಸಾರ್ವಜನಿಕರ ಮುಕ್ತ ಮಾಹಿತಿ ನೀಡುವಂತೆ ವಿವಿಧ ಇಲಾಖೆಗಳು ತಮ್ಮ ಕಚೇರಿಗಳಲ್ಲಿ ಬ್ಯಾನರ್, ಪೋಸ್ಟರ್ ಗಳನ್ನು ಅಳವಡಿಸಬೇಕು ಎಂದು ತಿಳಿಸಿದರು.

ತಾಲೂಕಾ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಸಂಪನ್ಮೂಲ ವ್ಯಕ್ತಿಗಳ ಮೂಲಕ ಹೆಚ್ಚಿನ ಪ್ರಚಾರ ಕೈಗೊಳ್ಳಲು ಜಿಲ್ಲಾ ಪಂಚಾಯತ್ ಕ್ರಮ ವಹಿಸಬೇಕು.

ಇದರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪಾತ್ರ ಬಹಳಷ್ಟಿದೆ ಆಶಾ ಕಾರ್ಯಕರ್ತೆಯರಿಂದ ಬೃಹತ್ ಉದ್ಯೋಗಮೇಳದ ಮಾಹಿತಿ ನೀಡಬೇಕು ಎಂದರು.

ಮಹಾನಗರ ಪಾಲಿಕೆ ವಾಹನಗಳಲ್ಲಿ ಧ್ವನಿ ವರ್ಧಕಗಳು ಮೂಲಕ ಪ್ರಚಾರ ಕೈಗೊಳ್ಳಬೇಕು. ಜಿಟಿಟಿಸಿ, ಐಟಿಐ ಕಾಲೇಜುಗಳಲ್ಲಿ ಈಗಾಗಲೇ ವ್ಯಾಸಂಗ ಮಾಡಿದ ಹಿಂದಿನ ಸಾಲಿನ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಬೇಕು. ಅತಿ ಹೆಚ್ಚು ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಲು ಸಲಹೆ ನೀಡಬೇಕು ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೋನಕೇರಿ ತಿಳಿಸಿದರು.

ಪಿಎಂ ವಿಶ್ವಕರ್ಮ ಯೋಜನೆ:

ಪಿಎಂ ವಿಶ್ವಕರ್ಮ ಯೋಜನೆಯಡಿ ಪಾರಂಪರಿಕವಾಗಿ ಕೆಲಸ ಮಾಡುತ್ತಿರುವ ಬಡಿಗ, ಅಕ್ಕಸಾಲಿಗ, ಕಂಬಾರ, ಕುಂಬಾರ ಸೇರಿದಂತೆ ಇತರೆ ವರ್ಗಗಳ ಜನರ ಆರ್ಥಿಕತೆ ಸುಧಾರಣೆಗೆ ಕೇಂದ್ರ ಸರ್ಕಾರದ ಯೋಜನೆಯಡಿ ಸಾಲ ಸೌಲಭ್ಯ ನೀಡಲಾಗುತ್ತಿದೆ.

ಸ್ವಯಂ ಉದ್ಯೋಗ ಕೈಗೊಳ್ಳಲು ಸಾಲ ಸೌಲಭ್ಯಕ್ಕಾಗಿ:

ದೇಶದಲ್ಲೇ ಬೆಳಗಾವಿ ಜಿಲ್ಲೆಯಲ್ಲಿ ಅತಿ ಹೆಚ್ಚು ಅರ್ಜಿಗಳು ಬಂದಿವೆ. ಅದೇ ರೀತಿಯಲ್ಲಿ ಪಿಎಂ ಸ್ವ–ನಿಧಿ ಯೋಜನೆಯಡಿ ಅರ್ಜಿಗಳನ್ನು ಸಲ್ಲಿಸಲು ತಾಂತ್ರಿಕ ದೋಷಗಳು ಎದುರಾಗುತ್ತಿವೆ. ಕೂಡಲೇ ತಾಂತ್ರಿಕ ದೋಷ ಸರಿಪಡಿಸಲು ಕ್ರಮ ವಹಿಸಲಾಗುವುದು ಎಂದು ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿಗಳು ವಿವರಿಸಿದರು.

ಈ ವೇಳೆ ಮಾತನಾಡಿದ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ ವ್ಯವಸ್ಥಾಪಕ ಡಾ. ಸಂಜೀವ ತಿಗಣಿ ಅವರು ಜಿಲ್ಲೆಯಲ್ಲಿ ಬೀದಿ ಬದಿ ವ್ಯಾಪಾರಸ್ಥರು ಮೊದಲ ಹಂತದಲ್ಲಿ ಸುಮಾರು 20 ಕೋಟಿ ಸಾಲ ಸೌಲಭ್ಯ ಪಡೆದಿದ್ದಾರೆ. ಈಗಾಗಲೇ ಮರು ಪಾವತಿ ಮಾಡಿದ ವ್ಯಾಪಾರಸ್ಥರಿಗೆ ಹಂತವಾಗಿ ಹೆಚ್ಚಿನ ಸಾಲ ಸೌಲಭ್ಯ ನೀಡಲಾಗುತ್ತಿದೆ ಎಂದು ಹೇಳಿದರು.

ಪಿಎಂ ಸ್ವ ನಿಧಿಯ ಸಮೃದ್ಧಿ ಯೋಜನೆಯಡಿ ಆರ್ಥಿಕ ಸಬಲೀಕರಣ ಹೊಂದಿದ ಜಿಲ್ಲೆಯ 33 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಮೀಕ್ಷೆ ನಡೆಸಬೇಕು. ಇದಕ್ಕೆ ಸರ್ಕಾರದಿಂದ 5 ಲಕ್ಷ ಅನುದಾನ ನೀಡಲಾಗಿದೆ. ಸಮೀಕ್ಷೆ ಕಾರ್ಯ ಕೈಗೊಳ್ಳಲು ಹೊರಗುತ್ತಿಗೆ ಮೇರೆಗೆ ನೌಕರರನ್ನು ನೇಮಿಸಬೇಕು. ಮಾರ್ಚ್ ಅಂತ್ಯದೊಳಗೆ ಸಮೀಕ್ಷೆ ಕಾರ್ಯ ಪೂರ್ಣಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ಸೂಚಿಸಿದರು.

ಜಿಲ್ಲಾ ಕೌಶ್ಯಾಭಿವೃದ್ಧಿ ಅಧಿಕಾರಿ ಚಿದಾನಂದ ಬಾಕೆ, ಕಾರ್ಮಿಕ ಇಲಾಖೆ ಅಧಿಕಾರಿ ತರನ್ನಂ ಬೆಂಗಾಲಿ, ಜಗದೀಶ್ ಪೌರಾಯುಕ್ತ ಜಗದೀಶ್ ಹುಲಗೆಜ್ಜೆ, ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕ ವಾಸುದೇವ್ ದೊಡಮನಿ, ಬೆಳಗಾವಿ ಕಾರ್ಮಿಕ ನಿರೀಕ್ಷಕರಾದ ಸಂಜೀವ್ ಭೋಸ್ಲೆ, ಸರಕಾರಿ ಪಾಲಿಟೆಕ್ನಿಕ್ ಪ್ರಾಂಶುಪಾಲರಾದ ಮಹೇಶ್ ಡೊಳ್ಳಿನ, ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಪೌರಕಾರ್ಮಿಕದಿಂದ ಮಹಾಪೌರ ಸ್ಥಾನಕ್ಕೆ ಸವಿತಾ ಕಾಂಬಳೆ : ಅನಿಲ ಬೆನಕೆ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯ 22ನೇ ಅವದಿಯ ಮೇಯರ ಉಪಮೇಯರ ಚುನಾವಣೆ ಹಿನ್ನಲೆಯಲ್ಲಿ ಶ್ರೀಮತಿ. ಸವಿತಾ ಕಾಂಬಳೆ ಮಹಾಪೌರ ಸ್ಥಾನಕ್ಕೆ ಹಾಗೂ ಶ್ರೀ.ಆನಂದಚವ್ಹಾಣ ಉಪಮಹಾಪೌರರಾಗಿ ಆಯ್ಕೆಯಾಗಿರುತ್ತಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅನಿಲ ಬೆನಕೆ, ಮೋದಿ ಹೈ ತೊ ಮುಮ್ಕಿನ್ ಹೈ ಗೆ ಮತ್ತೊಂದು ಉದಾಹರಣೆ ಪೌರಕಾರ್ಮಿಕದಿಂದ ಮಹಾಪೌರ ಸ್ಥಾನ ಬಿಜೆಪಿಯಲ್ಲಿ ಮಾತ್ರ ಸಾಧ್ಯ ನಾರಿ ಶಕ್ತಿಗೆ ಬೆಳಗಾವಿ ಮಹಾನಗರ ಪಾಲಿಕೆ ಮತ್ತೋಮ್ಮೆ ಉದಾಹರಣೆ. ಬೆಳಗಾವಿ ಮಹಾನಗರ ಪಾಲಿಕೆಯ ಬಿಜೆಪಿ ಎಲ್ಲ ನಗರಸೇವಕರು ಒಮ್ಮತದಿಂದ ಐತಿಹಾಸಿಕ ನಿರ್ಣಯತೆಗೆದುಕೊಂಡಿದ್ದು. ಬೆಳಗಾವಿ ಬಡಕುಟುಂಬದಲ್ಲಿ ಹುಟ್ಟಿದ ಶ್ರೀಮತಿ ಸವಿತಾ ಕಾಂಬಳೆ ಹಾಗೂ ಸಮಾಜಸೇವೆ ನಿರ್ವಹಿಸುತ್ತಿರುವಆನಂದಚವ್ಹಾಣಅವರಿಗೆ ಹೃತ್ಪೂರ್ವಕಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿಶಾಸಕ ಅಭಯ ಪಾಟೀಲ, ಮುರುಗೇಶ ನೀರಾಣಿ, ಸಂಸದರಾದ ಮಂಗಲಾ ಅಂಗಡಿ ಸೇರಿದಂತೆ ಬಿಜೆಪಿ ಹಿರಿಯ ನಾಯಕರು ಹಾಗೂ ಬಿಜೆಪಿ ಮಹಾನಗರಪಾಲಿಕೆ ಬೆಳಗಾವಿ ಸದಸ್ಯರು ಉಪಸ್ಥಿತರಿದ್ದರು.

ಸದ್ದಿಲ್ಲದೆ ಸಿದ್ಧವಾಗುತ್ತಿದೆ 'ಶರಣರ ಶಕ್ತಿ' ಭಕ್ತಿ ಪ್ರಧಾನ ಚಲನಚಿತ್ರ

ಹುಬ್ಬಳ್ಳಿ : ಶ್ರೀಶಾ ಫಿಲ್ಮ್ ಹುಬ್ಬಳ್ಳಿ ಅರ್ಪಿಸುವ 'ಶರಣರ ಶಕ್ತಿ' ತಡಿವ್ಯಾರ ನೋಡು ! – ಭಕ್ತಿ ಪ್ರಧಾನ ಕನ್ನಡ ಚಲನಚಿತ್ರವೊಂದು ಸದ್ದಿಲ್ಲದೆ ಚಿತ್ರೀಕರಣ ಮುಗಿಸಿ, ಡಬ್ಬಿಂಗ್ ಹಂತವನ್ನೂ ಮುಗಿಸಿದೆ.

ಮಿಶ್ರಕೋಟಿ, ಕಾಮಧೇನು, ಗಂಜಿಗಟ್ಟಿ, ಉಳವಿ ಸುತ್ತಮುತ್ತ ಸತತ ಚಿತ್ರೀಕರಣ ನಡೆಸಲಾಗಿದ್ದು, 12 ನೇ ಶತಮಾನದಲ್ಲಿ ಅಣ್ಣ ಬಸವಣ್ಣನವರನ್ನು ಒಮ್ಮೆ ಕಾಣುವುದೇ ಜೀವನದ ಗುರಿ ಎಂದುಕೊಂಡವರು ಸಾಕಷ್ಟು ಶರಣರು. ಇವರೆಲ್ಲರಿಗೂ ಸ್ಫೂರ್ತಿಯಾದ ಶಕ್ತಿಸ್ಥಳವೇ ಅನುಭವಮಂಟಪ. ಅಲ್ಲಿಗೆ ಎಲ್ಲರೂ ಯಾಕೆ ಬಂದರು ಎನ್ನುವುದೇ ಕಥೆಯ ಮುಖ್ಯ ಸಾರ. ನಂತರ ಬಸವಣ್ಣನವರು ಹರಳಯ್ಯ,ಮಧುವರಸರ ಮಕ್ಕಳ ಮದುವೆ, ವರ್ಣಸಂಕರ, ಗಡಿಪಾರು ಎಲ್ಲವನ್ನೂ ಕಥೆ ಹೊಂದಿದೆ. ಕಲ್ಯಾಣ–ಕ್ರಾಂತಿಯ ನಂತರ ಶರಣರು ವಚನ ಸಾಹಿತ್ಯ ರಕ್ಷಣೆಗೆ ಪಟ್ಟ ಕಷ್ಟಗಳು ,ಹೋರಾಟಗಳು, ಚನ್ನಬಸವಣ್ಣ ಉಳವಿ ಕಡೆಗೆ ನಡೆದ ಪ್ರಸಂಗವನ್ನು ಇಲ್ಲಿ ತೋರಿಸಲಾಗಿದೆ, 130ಕ್ಕೂ ಮಿಕ್ಕಿ ಶರಣರ ಪಾತ್ರಗಳು ಇದರಲ್ಲಿದ್ದು ಉತ್ತರ ಕರ್ನಾಟಕದ ಕಲಾವಿದರೇ ಅಭಿನಯಿಸಿರುವ, ಅವರೇ ಧ್ವನಿ ಕೂಡ ನೀಡಿರುವ ಈ ಚಿತ್ರದಲ್ಲಿ ಜಗಜ್ಯೋತಿ ಬಸವಣ್ಣನವರಾಗಿ ಮಂಜುನಾಥ ಗೌಡ್ರು, ಚನ್ನ ಬಸವಣ್ಣನವರಾಗಿ ರಂಜನ್‌ರಾಜ್, ಅಕ್ಕನಾಗಮ್ಮ ಪಾತ್ರದಲ್ಲಿ ಆರಾಧನಾ ಕುಲಕರ್ಣಿ, ಗಂಗಾಂಬಿಕೆಯಾಗಿ ಸಂಗೀತಾ ವಸಂತ, ನೀಲಾಂಬಿಕೆ ಅಮೃತಾ ಸವಡಿ ಜೋಶಿ, ಅಕ್ಕಮಹಾದೇವಿಯಾಗಿ ರಮ್ಯಾ ಗೌಡ್ರು, ಬಿಜ್ಜಳನಾಗಿ ರಾಘವೇಂದ್ರ ಕಬಾಡಿ, ಅಲ್ಲಮಪ್ರಭುವಾಗಿ ಮಂಜುನಾಥಯ್ಯ ಬಿ.ಎಮ್, ಸಿದ್ಧರಾಮರಾಗಿ ಸಚಿನ್ ಮಾಗಣಗೇರಿ ಮೊದಲಾದವರು ಮನೋಜ್ಞವಾಗಿ ಅಭಿನಯಿಸಿದ್ದಾರೆ ಎಂದು ನಿರ್ದೇಶಕ ದಿಲೀಪ ಶರ್ಮ ತಿಳಿಸಿದ್ದಾರೆ.

ಚಿತ್ರಕ್ಕೆ ಮುಂಜಾನೆಮಂಜು ಛಾಯಾಗ್ರಹಣ, ಕೆ.ಕಲ್ಯಾಣ ಸಾಹಿತ್ಯ, ವಿನುಮನಸು ಸಂಗೀತ, ಆರ್.ಮಹಾಂತೇಶ ಸಂಕಲನ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಪತ್ರಿಕಾ ಸಂಪರ್ಕ, ದಿಲೀಪ್ ಶರ್ಮ ಚಿತ್ರಕಥೆ, ಸಂಭಾಷಣೆ ಜೊತೆಗೆ ಎರಡು ಹಾಡುಗಳನ್ನು ಬರೆದಿದ್ದು ಜೊತೆಗೆ ನಿರ್ದೇಶನ ಹೊಣೆ ಹೊತ್ತಿದ್ದಾರೆ. ಚಿತ್ರವನ್ನು ಶ್ರೀಮತಿ ಅರಾಧನಾ ಕುಲಕರ್ಣಿ ನಿರ್ಮಿಸುತ್ತಿದ್ದು ಮಾರ್ಚ ಕೊನೆವಾರದಲ್ಲಿ ಬಿಡುಗಡೆ ಮಾಡುವ ಬಗ್ಗೆ ತಯ್ಯಾರಿ ನಡೆದಿದೆ ಎಂದು ನಿರ್ಮಾಪಕಿ ಆರಾಧನಾ ತಿಳಿಸಿದ್ದಾರೆ.

ರಾಜ್ಯದಲ್ಲಿ ವೈಜ್ಞಾನಿಕ ಅಕಾಡೆಮಿ ಸ್ಥಾಪನೆ ಮಾಡಲು ಮುಖ್ಯಮಂತ್ರಿಗಳಿಗೆ ಮನವಿ

ಬೆಳಗಾವಿ: ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ರಾಜ್ಯಘಟಕದ ವತಿಯಿಂದ ರಾಜ್ಯದಲ್ಲಿ ಸಾರ್ವಜನಿಕರಲ್ಲಿನ ಮೌಢ್ಯತೆಯನ್ನು ನಿವಾರಣೆ ಮಾಡುವ ಹಿನ್ನಲೆಯಲ್ಲಿ ರಾಜ್ಯದಲ್ಲಿ ಮೌಢ್ಯ ಮುಕ್ತ ವೈಜ್ಞಾನಿಕ ಅಕಾಡೆಮಿ ಸ್ಥಾಪನೆ ಮಾಡುವಂತೆ ಅಗ್ರಹಿಸಿ ಜಿಲ್ಲಾಧಿಕಾರಿ ಮುಖಾಂತರ ಮುಖ್ಯಮಂತ್ರಿಗಳಿಗೆ ಅಗ್ರಹಿಸಿ ಮುಂಜಾನೆ ಮನವಿ ಅರ್ಪಿಸಲಾಯಿತು,

ರಾಜ್ಯಾಧ್ಯಕ್ಷರಾದ ಡಾ, ಹುಲಿಕಲ್ಲಟ ರಾಜ್ರವರ ನಿರ್ದೇಶನದ ಮೇರೆಗೆ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತಿ ಜಿಲ್ಲಾಧ್ಯಕ್ಷರಾದ ಸಂಗಮೇಶಖನ್ನಿ ನಾಯ್ಕರ, ಪದಾಧಿಕಾರಿಗಳಾದ ಜನಪರ ಚಿಂತಕರಾದ ಡಾ.ಜಗದೀಶ ಹಾರುಗೋಪ್ಪ, ಶ್ರೀಮತಿ ಕೆಎಸ್ಗಣಾಚಾರಿ, ಬಸವರಾಜ ಕೋಲಕಾರ, ಜಿಲ್ಲಾ ನೌಕರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷರಾದ ಸುರೇಶ ಸಕ್ತೆನವರ, ಮುಖ್ಯಶಿಕ್ಷಕರುಸಾಹಿತಿಗಳು, ಸಂಘಟಕರಾದ ಬಸವರಾಜ ಸುಣಗಾರ ಸೇರಿದಂತೆ ಹಲವರು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಅಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿಸಲ್ಲಿಸಿದರು,

ರಾಜ್ಯದಲ್ಲಿ ಜನರಲ್ಲಿ ಮೌಢ್ಯ, ಮೂಢನಂಬಿಕೆ ಹೋಗಲಾಡಿಸಲು ಕಾನೂನಿಗಿಂತ ಜಾಗೃತಿ ಮೂಡಿಸಬೇಕಾಗಿದೆ ಅನಿಟ್ಟಿನಲ್ಲಿ ವೈಜ್ಞಾನಿಕ ಅಕಾಡೆಮಿ ಸ್ಥಾಪನೆ ಅವಶ್ಯಕತೆ ಇದೆ ವೈಜ್ಞಾನಿಕ ಕಾರ್ಯಕ್ರಮಗಳಿಗೆ ಸರಕಾರದಿಂದ ಸಹಾಯಧನ ಪ್ರತಿವರ್ಷ ನೀಡಬೇಕು, ರಾಜ್ಯದಲ್ಲಿ ವೈಜ್ಞಾನಿಕ ವಿಶ್ವವಿದ್ಯಾಲಯ ಸ್ಥಾಪಿಸಬೇಕು ವಿಜ್ಞಾನ ಸಿರಿಮಾಸ ಪತ್ರಿಕೆ ಎಲ್ಲೆಡೆ ದೊರೆಯುವಂತೆ ಮಾಡಬೇಕು, ವಿಜ್ಞಾನ ಗ್ರಾಮಗ್ರಾಮ ಸ್ಥಾಪನೆಗೆ ಅನುಧಾನ ನೀಡಬೇಕು ಸೇರಿದಂತೆ ಹಲವು ಬೇಡಿಕೆಗಳನ್ನು ಮನವಿಯಲ್ಲಿ ಮಂಡಿಸಲಾಗಿದೆ,

ಮನವಿ ಸ್ವೀಕರಿಸಿದ ಅಧಿಕಾರಿಗಳು ಮುಂದಿನ ಕ್ರಮಗಳಿಗಾಗಿ ಮುಖ್ಯಮಂತ್ರಿಗಳಿಗೆ ಕಳಿಸುವ ಭರವಸೆ ನೀಡಿದರು.

ಸಹಾಯಾರ್ಥ ನಾಟಕ ಪ್ರದರ್ಶನ; ಮಾಸಾಶನ ವಯಸ್ಸನ್ನು ಇಳಿಸಬೇಕು: ಕಲಾವಿದೆ ಭಾರತಿ

ಬೆಳಗಾವಿ: ಗುರುವಾರ ದಂದು ಬೆಳಿಗ್ಗೆ 10–30ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ ರಂಗಭೂಮಿ ಕಲಾವಿದೆ ಭಾ